ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI


ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 76 RNI Number : KNKAN/25/A2770 25-03-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :76 ರಾಯಚೂರು 25-03-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ವದಂತಿಗೆ ಕಿವಿಗೊಡಬೇಡಿ; ಪೆಟ್ರೋಲ್ - ಡೀಸೆಲ್ ಕೊರತೆಯಿಲ್ಲ, ದಾಸ್ತಾನು ಸಾಕಷ್ಟಿದೆ: ಕೇಂದ್ರ ಸರ್ಕಾರ



ನವದೆಹಲಿ,ಮಾ.24-

ದೇಶದಲ್ಲಿ ಎಲ್‌ಪಿಜಿಯಂತೆ ಪೆಟ್ರೋಲ್ ಮತ್ತು ಡೀಸೆಲ್ ಕೊರತೆ ಕೂಡ ಉಂಟಾಗಿದೆ ಎಂಬ ವದಂತಿ ಹಬ್ಬಿಸಲಾಗುತ್ತಿದ್ದು, ಇದಕ್ಕೆ ಕೇಂದ್ರ ಸರ್ಕಾರ ಇಂದು (ಮಂಗಳವಾರ) ಸ್ಪಷ್ಟನೆ ನೀಡಿದೆ.

ಪಶ್ಚಿಮ ಏಷ್ಯಾದಲ್ಲಿನ ಬೆಳವಣಿಗೆಗಳ ಕುರಿತು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಅವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಇಂಧನ ಕೊರತೆಯ ಬಗ್ಗೆ ವದಂತಿ ಹರಡಲಾ ಗುತ್ತಿದೆ. ನಮ್ಮ ಸಂಗ್ರಹಾಗಾರ ಗಳಲ್ಲಿ ಪೆಟ್ರೋಲ್, ಡೀಸೆಲ್ ಸಾಕಷ್ಟು ದಾಸ್ತಾನಿದೆ. ಜನರು ಈ ಬಗ್ಗೆ ಭಯಪಡುವ ಅಗತ್ಯವಿಲ್ಲ. ಖರೀದಿಗಾಗಿ ಮುಂಗಡ ಬುಕಿಂಗ್ ಮಾಡಿಕೊಳ್ಳಬೇಕಿಲ್ಲ ಎಂದು ಹೇಳಿದರು.

ನಿನ್ನೆಯಿಂದ ವದಂತಿ ಹರಡುವಿಕೆ ಮತ್ತು ಪ್ಯಾನಿಕ್ ಬುಕಿಂಗ್ ಕುರಿತು ಕೆಲವು ವರದಿಗಳಿವೆ. ಯಾವುದೇ ವದಂತಿಗಳಿಗೆ ಗಮನ ಕೊಡಬೇಡಿ. ಪ್ಯಾನಿಕ್ ಬುಕಿಂಗ್‌ನಿಂದ ದೂರವಿರಿ ಎಂದು ನಾನು ಜನರನ್ನು ವಿನಂತಿಸುತ್ತೇನೆ. ಎಲ್ಲಾ ಸಂಸ್ಕರಣಾಗಾರಗಳು ಪೂರ್ಣ ಸಾಮರ್ಥ್ಯದಿಂದ ತುಂಬಿವೆ. ಸಾಕಷ್ಟು ಇಂಧನ ದಾಸ್ತಾನಿದೆ. ದೇಶದಲ್ಲಿ ಒಂದು ಲಕ್ಷ ಪೆಟ್ರೋಲ್ ಪಂಪ್‌ಗಳಿವೆ. ಅವುಗಳು ಪೂರ್ಣ ಸಾಮರ್ಥ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಅವರು ತಿಳಿಸಿದರು.

ಪಿಎನ್‌ಜಿ ಸಂಪರ್ಕ ಪಡೆಯಿರಿ: ದೇಶೀಯ ಮತ್ತು ವಾಣಿಜ್ಯ ಗ್ರಾಹ ಕರು ಪಿಎನ್‌ಜಿಗೆ ವರ್ಗವಾಗುವಂತೆ ಭಾರತ ಸರ್ಕಾರ ಪೈಪ್ಡ್ ನೈಸರ್ಗಿಕ ಅನಿಲ (ಪಿಎನ್‌ಜಿ) ಸಂಪರ್ಕಗಳ ವಿಸ್ತರಣೆಯನ್ನು ಉತ್ತೇಜಿಸುತ್ತಿದೆ. ಈ ಹಿಂದೆಯೂ ಸಹ 60 ಲಕ್ಷ ಮನೆಗಳಿಗೆ ಪಿಎನ್‌ಜಿ ಸಂಪರ್ಕವನ್ನು ತಕ್ಷಣವೇ ನೀಡಬಹುದು ಎಂದು ಘೋಷಿಸಲಾಗಿತ್ತು. ಈಗ ಅದರ ಸಂಪರ್ಕವನ್ನು ಜನರು ತೆಗೆದುಕೊಳ್ಳುವಂತೆ ಮನವಿ ಮಾಡುತ್ತೇವೆ ಎಂದರು.

ನಿನ್ನೆ ಒಂದೇ ದಿನ ದೇಶೀಯ ಮತ್ತು ವಾಣಿಜ್ಯ ಗ್ರಾಹಕರಿಗೆ 7.5 ಲಕ್ಷ ಪಿಎನ್‌ಜಿ ಸಂಪರ್ಕಗಳನ್ನು ನೀಡಲಾಗಿದೆ. ವಿಶ್ವದಲ್ಲಿನ ಏರುಪೇರುಗಳಿಂದಾಗಿ ಎಲ್‌ಪಿಜಿ ಪೂರೈಕೆಯ ಮೇಲೆ ಪರಿಣಾಮ ಬೀರಿದೆ. ನಮ್ಮ ಸರಕುಗಳು ಸಾಲುಗಟ್ಟಿ ನಿಂತಿವೆ. ಆದರೆ, ಯಾವುದೂ ಹಾಳಾದ ಬಗ್ಗೆ ವರದಿಯಾಗಿಲ್ಲ ಎಂದು ತಿಳಿಸಿದರು.

ವದಂತಿಯಿಂದಾಗಿ ಜನರು ಭೀತಿಗೊಳಗಾಗಿ ಬುಕಿಂಗ್ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಆದರೆ, ಪೂರೈಕೆಯಲ್ಲಿ ಸಾಮಾನ್ಯ ಸ್ಥಿತಿ ಇದೆ. ವಾಣಿಜ್ಯ ಎಲ್‌ಪಿಜಿ ಹಂಚಿಕೆಯು ಬೇಡಿಕೆಯಲ್ಲಿ ಶೇಕಡಾ 50ಕ್ಕೆ ಹೆಚ್ಚಿಸಲಾಗಿದೆ. ರೆಸ್ಟೋರೆಂಟ್‌ಗಳು, ಡಾಬಾಗಳು, ಕೈಗಾರಿಕಾ ಕ್ಯಾಂಟೀನ್‌ಗಳು, ಸರ್ಕಾರ ಮತ್ತು ಸ್ಥಳೀಯ ಸಂಸ್ಥೆಗಳು ನಡೆಸುವ ಮಳಿಗೆಗಳು, ಸಮುದಾಯ ಅಡುಗೆಮನೆಗಳು ಮತ್ತು ವಲಸೆ ಕಾರ್ಮಿಕರಿಗೆ ಆದ್ಯತೆ ನೀಡಲು ಸೂಚಿಸಲಾಗಿದೆ ಎಂದು ಶರ್ಮಾ ಅವರು ಹೇಳಿದರು.

ಭಾರತದತ್ತ ಮತ್ತೆರಡು ಹಡಗುಗಳ ಪಯಣ: ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿ ಸುಮಾರು 11 ಲಕ್ಷ ವಲಸೆ ಕಾರ್ಮಿಕರು ಗ್ಯಾಸ್ ಸಂಪರ್ಕಗಳನ್ನು ಪಡೆದಿದ್ದಾರೆ. ಕೊರತೆ ನೀಗಿಸಲು ಮತ್ತು ಅಕ್ರಮ ದಾಸ್ತಾನಿನ ಮೇಲೆ ಕಣ್ಗಾವಲು ಹೆಚ್ಚಿಸಲು ರಾಜ್ಯ ಸರ್ಕಾರಗಳಿಗೆ ನಿರಂತರ ಸೂಚನೆ ನೀಡಲಾಗುತ್ತಿದೆ. ಈ ಕುರಿತು ತಪಾಸಣೆ ನಡೆಯುತ್ತಿದೆ. ಸುಮಾರು 155 ಅಕ್ರಮ ಸಂಗ್ರಹಕಾರರನ್ನು ಬಂಧಿಸಲಾಗಿದೆ ಎಂದು ಅವರು ಹೇಳಿದರು.

ಹಡಗು ಮತ್ತು ಜಲಮಾರ್ಗ ಸಚಿವಾಲಯದ ವಿಶೇಷ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿನ್ಹಾ ಅವರು ಮಾತನಾಡಿ, ಕೊಲ್ಲಿ ಪ್ರದೇಶದಲ್ಲಿ ನಮ್ಮ ಎಲ್ಲಾ ಹಡಗುಗಳು ಸುರಕ್ಷಿತವಾಗಿವೆ. ಕಳೆದ 24 ಗಂಟೆಗಳಲ್ಲಿ ಯಾವುದೇ ಅಹಿತಕರ ಘಟನೆ ದಾಖಲಾಗಿಲ್ಲ. ಎಲ್‌ಪಿಜಿ ತುಂಬಿದ ಭಾರತದ ಎರಡು ಹಡಗುಗಳು ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿವೆ. ಮಾರ್ಚ್ 26 ಮತ್ತು 27 ರಂದು ಭಾರತದ ಬಂದರುಗಳಿಗೆ ಬರಲಿವೆ ಎಂದು ಅವರು ತಿಳಿಸಿದರು.

ಅನುದಾನ ದುರುಪಯೋಗ ಆರೋಪ: ಅಧ್ಯಕ್ಷ ಅಜಯ್ ಸಿಂಗ್ ರಾಜೀನಾಮೆಗೆ ಆಗ್ರಹ -ರಾಘವೇಂದ್ರ ಕುಷ್ಟಗಿ



ರಾಯಚೂರು,ಮಾ.24-

ಕೆಕೆಆರ್ ಡಿಬಿ (ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ) ಕಾರ್ಯವೈಖರಿಯ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಹೈದ್ರಾಬಾದ್ ಕರ್ನಾಟಕ ಜನಾಂದೋಲನ ಕೇಂದ್ರ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ರಾಘವೇಂದ್ರ ಕುಷ್ಟಗಿ, ಮಂಡಳಿಯ ಅಧ್ಯಕ್ಷ ಅಜಯ್ ಸಿಂಗ್ ಅವರು ತಕ್ಷಣ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2025-26ನೇ ಸಾಲಿನಲ್ಲಿ ಮಂಡಳಿಗೆ 5 ಸಾವಿರ ಕೋಟಿ ರೂ. ಅನುದಾನ ಲಭ್ಯವಿದ್ದರೂ, ಕೇವಲ 862.93 ಕೋಟಿ ರೂ. ಮೊತ್ತದ ಕಾಮಗಾರಿಗಳಿಗೆ ಮಾತ್ರ ಕ್ರಿಯಾ ಯೋಜನೆ ಸಲ್ಲಿಸಿ ಅನುಮೋದನೆ ಪಡೆದಿರುವುದು ಗಂಭೀರ ಲೋಪ ಎಂದು ಆರೋಪಿಸಿದರು.

ಉಳಿದ 4,137 ಕೋಟಿ ರೂ. ಗಳಿಗೆ ಯಾವುದೇ ಕ್ರಿಯಾ ಯೋಜನೆ ಸಲ್ಲಿಸದಿರುವುದನ್ನು ಸರ್ಕಾರದ ಯೋಜನಾ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯು 03/02/2026ರಂದು ಬರೆದ ಪತ್ರದಲ್ಲಿ ಉಲ್ಲೇಖಿಸಿರುವುದು ಬಹಿರಂಗವಾಗಿದೆ ಎಂದು ಹೇಳಿದರು.

ಮಂಡಳಿಯು ಕಾಮಗಾರಿಗಳ ಗುಣಮಟ್ಟ ಪರಿಶೀಲನೆಗಾಗಿ ಮೂರನೇ ವ್ಯಕ್ತಿ ತಪಾಸಣೆ ಕಡ್ಡಾಯಗೊಳಿಸಿದ್ದ ಕಲಬುರಗಿ ಹೈಕೋರ್ಟ್

ಮೂರನೇಯ ಪುಟಕ್ಕೆ

ತುಂಗಭದ್ರಾ ಕಾಲುವೆ ಕುಸಿತ ಭೀತಿ: ದುರಸ್ತಿ ಕೈಗೊಳ್ಳದಿದ್ದರೆ ಭಾರೀ ನಷ್ಟ- ಚಾಮರಾಸ ಮಾಲಿ ಪಾಟೀಲ್



ರಾಯಚೂರು,ಮಾ.24-

ತುಂಗಭದ್ರಾ ಎಡದಂಡೆ ಕಾಲುವೆಯ ದುರ್ಬಲ ಕಾಮಗಾರಿಗಳ ಪರಿಣಾಮವಾಗಿ ಕಾಲುವೆ ಒಡೆದುಹೋಗುವ ಭೀತಿ ಎದುರಾಗಿದ್ದು, ತುರ್ತು ದುರಸ್ತಿ ಕಾರ್ಯಗಳನ್ನು ಕೈಗೊಳ್ಳದಿದ್ದರೆ ಬೆಳೆಗಾಲದಲ್ಲಿ ರೈತರಿಗೆ ಭಾರೀ ನಷ್ಟ ಉಂಟಾಗುವ ಸಾಧ್ಯತೆ ಇದೆ ಎಂಬ ಗಂಭೀರ ಎಚ್ಚರಿಕೆಯನ್ನು ರೈತ ಮುಖಂಡ ಚಾಮರಾಸ ಮಾಲಿ ಪಾಟೀಲ್ ನೀಡಿದ್ದಾರೆ.


ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ 2,000 ಕ್ಯೂಸೆಕ್ ನೀರು ಹರಿಸಿದ ವೇಳೆ 13ನೇ ಮೈಲು ಪ್ರದೇಶದಲ್ಲಿ ಕಾಲುವೆ ಒಡೆದುಹೋಗಿರುವುದು ಕಾಮಗಾರಿಗಳ ಗುಣಮಟ್ಟದ ಮೇಲಿನ ಪ್ರಶ್ನೆಗಳನ್ನು ಎತ್ತಿದೆ ಎಂದು ಹೇಳಿದರು. ಅಗಲೀಕರಣ ಕಾಮಗಾರಿ ನಡೆದ ಭಾಗಗಳಲ್ಲಿ ನಾಲ್ಕು ಇಂಚು ಕಾಂಕ್ರೀಟ್ ಇರಬೇಕಾದರೆ ಕೇವಲ ಎರಡು ಇಂಚು ಮಾತ್ರ ಹಾಕಿರುವುದು ಸ್ಪಷ್ಟವಾಗಿ ಗೋಚರಿಸಿದೆ ಎಂದು ಅವರು ಆರೋಪಿಸಿದರು.

2010ರಿಂದ ಇದುವರೆಗೆ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ವೆಚ್ಚ ಮಾಡಿದ್ದರೂ ಕಾಮಗಾರಿಗಳು ಮಾನದಂಡಕ್ಕೆ ತಕ್ಕಂತೆ ನಡೆದಿಲ್ಲವೆಂಬುದು ವಿಷಾದನೀಯ. ಬೇಸಿಗೆ ಸಮಯದಲ್ಲೇ ನೀರಿನ ಒತ್ತಡ ಕಡಿಮೆ ಇರುವಾಗ ದುರ್ಬಲ ಭಾಗಗಳನ್ನು ಬಲಪಡಿಸುವುದು ಸೂಕ್ತ, ಇಲ್ಲವಾದರೆ ಬೆಳೆಗಾಲದಲ್ಲಿ ಪರಿಸ್ಥಿತಿ ಮತ್ತಷ್ಟು ಗಂಭೀರವಾಗ

ಮೂರನೇಯ ಪುಟಕ್ಕೆ

ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿಗಳ ಸೂಚನೆ

ಡಾ.ಬಾಬು ಜಗಜೀವನ್ ರಾಮ್ ಜಯಂತಿಗೆ ಅಗತ್ಯ ಸಿದ್ಧತೆಯಾಗಲಿ



ರಾಯಚೂರು ಮಾರ್ಚ್ 24

ಜಿಲ್ಲೆಯಲ್ಲಿ ಏಪ್ರಿಲ್ 5ರಂದು ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ್ ರಾಮ್ ಅವರ ಜಯಂತಿಗೆ ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಂಬಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾರ್ಚ್ 24ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಡಾ.ಬಾಬು ಜಗಜೀವನ್ ರಾಮ ಅವರ ಜಯಂತಿ ಆಚರಣೆ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಡಾ.ಬಾಬು ಜಗಜೀವನ ರಾಮ್ ಅವರ ವೃತ್ತದಲ್ಲಿನ ಪುತ್ಥಳಿಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಮತ್ತು ಸಮಾಜ ಕಲ್ಯಾಣ ಇಲಾಖೆಯಿಂದ ಪೂಜಾ ಕಾರ್ಯಕ್ರಮ ಮತ್ತು ಗಣ್ಯರಿಂದ ಪುಷ್ಪನಮನ ಕಾರ್ಯಕ್ರಮ ಇರುತ್ತದೆ. ನಂತರ ರಂಗಮದಿರಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.

ಡಾ.ಬಾಬು ಜಗಜೀವನ ರಾಮ್‌ರವರ ಪುತ್ಥಳಿಗೆ ದೀಪಾಲಂಕಾರ ಮಾಡಬೇಕು. ವೃತ್ತದ ಸುತ್ತಲು ಶುಚಿತ್ವ ಕಾರ್ಯ ನಡೆಸಬೇಕು. ಪುತ್ಥಳಿಯ ಹತ್ತಿರ ಪೆಂಡಾಲ್ ಹಾಕಿಸಿ ಗಣ್ಯ ಮಹನಿಯರಿಗೆ ಆಸನ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ವೇದಿಕೆಯ ಕಾರ್ಯಕ್ರಮಕ್ಕೆ ಎಲ್ಲಾ ರೀತಿಯ ಸಿದ್ಧತೆಯಾಗಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.


ಶಿಷ್ಟಾಚಾರದ ಪ್ರಕಾರ ಆಮಂತ್ರಣ ಪತ್ರಿಕೆಗಳನ್ನು ಮುದ್ರಿಸಿ ವಿತರಿಸಬೇಕು. ಜಯಂತಿ ಕಾರ್ಯಕ್ರಮಕ್ಕೆ ಹಂಚಿಕೆ ಮಾಡಲಾಗಿರುವ ಕರ್ತವ್ಯಗಳನ್ನು ಯಾವುದೇ ಲೋಪ ಬಾರದ ಹಾಗೇ ಸಂಬಧಪಟ್ಟ ಅಧಿಕಾರಿಗಳು ಕರ್ತವ್ಯ ನಿರ್ವಹಿಸಬೇಕು. ಜಿಲ್ಲಾಮಟ್ಟದ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯವಾಗಿ ಜಯಂತಿ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು. ಕಾರ್ಯಕ್ರಮದಲ್ಲಿ ಹಾಜರಾತಿ ಪಡೆದುಕೊಳ್ಳಬೇಕು ಎಂದು ಅವರು ಸೂಚನೆ ನೀಡಿದರು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಸೇರಿದಂತೆ ಎಲ್ಲ ಕಾರ್ಯಕ್ರಮಗಳು ಅಚ್ಚುಕಟ್ಟಾಗಿ ನಡೆಯಬೇಕು ಎಂದು ಸೂಚನೆ ನೀಡಿದರು.

ಗಣ್ಯರಿಂದ ಸಲಹೆಗಳು:ಡಾ.ಬಾಬು ಜಗಜೀವನ ರಾಮ್ ವೃತ್ತದ ಅಭಿವೃದ್ಧಿ ಕೆಲಸವನ್ನು ಆದಷ್ಟು ಬೇಗನೆ ಮುಗಿಸಬೇಕೆಂದು ಸಮಾಜದ ಮುಖಂಡರಾದ ರವೀಂದ್ರ ಜಲ್ದಾರ್ ಅವರು ಸಲಹೆ ಮಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಡಾ.ಬಾಬು ಜಗಜೀವನ ರಾಮ್ ವೃತ್ತದ ಸುತ್ತಲೂ ಸಾಕಷ್ಟು ಸ್ವಚ್ಚತೆ ಕಾಯ್ದುಕೊಳ್ಳಬೇಕು. ಅಂಬೇಡ್ಕರ್ ವೃತದಲ್ಲಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ನಡೆಸುವಂತೆ ಸಮಾಜದ ಮುಖಂಡರಾದ

ಮೂರನೇಯ ಪುಟಕ್ಕೆ

ಹುಚ್ಚುನಾಯಿ ದಾಳಿ : 3 ಮಕ್ಕಳಿಗೆ ಗಾಯ



ಲಿಂಗಸುಗೂರು,ಮಾ.24-

ಪಟ್ಟಣದ ಬೀದಿಯಲ್ಲಿ ಆಟವಾಡುತ್ತಿದ್ದ ಮಕ್ಕಳ ಮೇಲೆ ಏಕಾಏಕಿ ದಾಳಿ ಮಾಡಿದ ಹುಚ್ಚುನಾಯಿ, ಮೂವರು ಮಕ್ಕಳಿಗೆ ಕಚ್ಚಿ ಗಾಯಗೊಳಿಸಿದೆ ಎಂದು ತಿಳಿದುಬಂದಿದೆ. ಗಾಯಗೊಂಡ ಮಕ್ಕಳನ್ನು ತಕ್ಷಣ ಸ್ಥಳೀಯರು ಆಸ್ಪತ್ರೆಗೆ ಸಾಗಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಅವರಲ್ಲಿ ಇಬ್ಬರ ಸ್ಥಿತಿ ಗಂಭೀರವಾಗಿದ್ದು, ಹೆಚ್ಚಿನ ಚಿಕಿತ್ಸೆ ಗೆ ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದೆ.

ಈ ಘಟನೆದಿಂದ ಪಟ್ಟಣದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಹುಚ್ಚುನಾಯಿ ಇನ್ನೂ ಸುತ್ತಮುತ್ತಲಿನ ಪ್ರದೇಶದಲ್ಲಿ ತಿರುಗಾಡುತ್ತಿರುವ ಶಂಕೆಯಿಂದ ಪೋಷಕರು ಮಕ್ಕಳನ್ನು ಹೊರಗೆ ಬಿಡಲು ಹೆದರುತ್ತಿದ್ದಾರೆ.

ಪಟ್ಟಣದ ನಿವಾಸಿಗಳು ತಕ್ಷಣ ಪಶುವೈದ್ಯಕೀಯ ಇಲಾಖೆ ಹಾಗೂ ಸ್ಥಳೀಯ ಪಂಚಾಯತ್ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಹುಚ್ಚುನಾಯಿಯನ್ನು ಹಿಡಿಯಲು ತುರ್ತು ಕ್ರಮ ಕೈಗೊಳ್ಳಬೇಕು, ಬೀದಿ ನಾಯಿಗಳ ಹಾವಳಿಯನ್ನು ನಿಯಂತ್ರಿಸಬೇಕು ಹಾಗೂ ನಾಯಿಗಳಿಗೆ ಲಸಿಕೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.



ಗಾಂಜಾ ಮಾರಾಟ ಆರೋಪ: ಯುವಕನ ವಿರುದ್ಧ ಪ್ರಕರಣ

ರಾಯಚೂರು, ಮಾ.18

ನಗರದ ನೇತಾಜಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ತಿಮ್ಮಾಪುರಪೇಟೆ ಪ್ರದೇಶದಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದ ಯುವಕನ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಪೆಟ್ರೋಲಿಂಗ್ ವೇಳೆ ಬಂದ ಖಚಿತ ಮಾಹಿತಿಯ ಮೇರೆಗೆ ಕೃಷ್ಣ (25), ಬೆಲ್ದಾರ್ ಕೆಲಸಗಾರ, ತಿಮ್ಮಾಪುರಪೇಟೆ ನಿವಾಸಿ, ಈತನು ಯಾವುದೇ ಲೈಸೆನ್ಸ್ ಇಲ್ಲದೆ ಮಾನವ ಆರೋಗ್ಯಕ್ಕೆ ಹಾನಿಕಾರಕವಾದ ಗಾಂಜಾವನ್ನು ವಶದಲ್ಲಿಟ್ಟುಕೊಂಡು ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದುದಾಗಿ ಪತ್ತೆಯಾಗಿದೆ.

ಈ ಕುರಿತು ನೇತಾಜಿ ನಗರ ಪೊಲೀಸ್ ಠಾಣೆಯಲ್ಲಿ ಎನ್‌ಡಿಪಿಎಸ್ ಕಾಯ್ದೆಯ ಕಲಂ 20(ಬಿ) ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ದಿ.27: ಒಳಮೀಸಲಾತಿ ಜಾರಿಗೆ ಆಗ್ರಹಿಸಿ ಬೆಂಗಳೂರಿನಲ್ಲಿ ಬಹಿರಂಗ ಮನವಿ ಸಮಾವೇಶ



ರಾಯಚೂರು,ಮಾ.24-

ರಾಜ್ಯ ಸರ್ಕಾರ ನಿರ್ಣಯದಂತೆ 56 ಸಾವಿರ ಹುದ್ದೆಗಳ ಭರ್ತಿಯಲ್ಲಿ ಪರಿಶಿಷ್ಟ ಜಾತಿಗೆ ನಿಗದಿ ಪಡಿಸಿದ ಶೇ.15 ರಷ್ಟು ಮೀಸಲಾತಿ ಅನ್ವಯ ದಿ. 27 ರಂದು ವಿಶೇಷ ಸಚಿವ ಸಂಪುಟದಲ್ಲಿ ಹುದ್ದೆಗಳ ಭರ್ತಿ ಮೂಲಕ ಪರಿಶಿಷ್ಟ ಜಾತಿಯ 101 ಜಾತಿಗಳಿಗೆ ಸಮಾನ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿ ದಿ. 27 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಬಹಿರಂಗ ಮನವಿ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಒಳಮೀಸಲಾತಿ ಸಾಮಾಜಿಕ ನ್ಯಾಯದ ಹೋರಾಟಗಾರ ಎಂ ಆರ್ ಭೇರಿ ಅವರು ಹೇಳಿದರು.ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಪರಿಶಿಷ್ಟ ಮೀಸಲಾತಿ ಒಳಮೀಸಲಾತಿ ಜಾರಿ ಮತ್ತು ಎಸ್ ಸಿಪಿ ಟಿ ಎಸ್ಪಿ ಹಾಗೂ ಎಸ್ಸಿ ಮತ್ತು ಎಸ್ಟಿ ಸಮುದಾಯಕ್ಕೆ ಮಾತ್ರ ಪಿಟಿಸಿಎಲ್ ಕಾಯ್ದೆ ಜಾರಿ ಹಾಗೂ ಐಪಿಡಿ ಸಾಲಪ್ಪ ವರದಿ ಅನುಷ್ಠಾನಕ್ಕೆ ಆಗ್ರಹಿಸಿ ಬಹಿರಂಗ ಮನವಿ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು. ಈ ಸಮಾವೇಶದಲ್ಲಿ ಜಿಲ್ಲೆಯಿಂದ 500ಕ್ಕೂ ಅಧಿಕ ಸಂಖ್ಯೆಯಲ್ಲಿ ದಲಿತಪರ ಸಂಘಟನೆ ಮುಖಂಡರು ಭಾಗವಹಿಸಲಿದ್ದಾರೆ ಎಂದರು. ಕಾಂಗ್ರೆಸ್ ಮತ್ತು ಬಿಜೆಪಿ ಮತ ಬ್ಯಾಂಕಿಗಾಗಿ ದಲಿತರನ್ನು ವಿಭಜನೆ ಮಾಡಲಾಗುತ್ತದೆ. ಒಳಮೀಸಲಾತಿ ಜಾರಿ ಮಾದಿಗರ ಸಮುದಾಯದ ಜನರ ಬಹುವರ್ಷಗಳ ಕನಸು, ಕೆಲವರಿಗೆ ಈಗಾಗಲೇ ಒಳ ಮೀಸಲಾತಿ ವಿರುದ್ಧವಾಗಿ ಹೋರಾಟ ನಡೆಸಿದ್ದಾರೆ ಇದು ದುರಂತ ಸಂಗಾತಿ. ರಾಜ್ಯ ಸರ್ಕಾರವು ನ್ಯಾ. ನಾಗಮೋಹನ್‌ದಾಸ್ ವರದಿಯ ಶಿಫಾರಸ್ಸಿನಂತೆ ಮಾಡಿರುವ ಪರಿಶಿಷ್ಟ ಜಾತಿ ಮೀಸಲಾತಿ ವರ್ಗೀಕರಣ ಕಾಯ್ದೆಯನ್ನು ಷೆಡ್ಯೂಲ್ಡ್ 9ಕ್ಕೆ ಸೇರಿಸಿ ಶೇ.24ರಂತೆ ಕೇಂದ್ರ ಸರ್ಕಾರವು ಕೂಡಲೆ ಜಾರಿ ಮಾಡುವಂತೆ ಕ್ರಮ ವಹಿಸಿ ಸುತ್ತೋಲೆ ಹೊರಡಿಸಬೇಕು. ಸ್ಥಳೀಯ ಚುನಾವಣೆಗಳಲ್ಲಿ ಒಳಮೀಸಲಾತಿ ಅನ್ವಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಾತಿ ನೀಡಬೇಕು ಎಂದು ಒತ್ತಾಯಿಸಿದ್ದಾರೆ.ಈ ಸಂದರ್ಭದಲ್ಲಿ ಮಲ್ಲೇಶ ಘಂಟಿ, ವೈ. ನರಸಪ್ಪ, ಅನೇಕರು ಉಪಸ್ಥಿತರಿದ್ದರು.

ಮಾರ್ಚ್ 27ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

ರಾಯಚೂರು ಮಾರ್ಚ್ 24

ಇಲ್ಲಿನ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಮಾರ್ಚ್ 27ರ ಬೆಳಗ್ಗೆ 10 ಗಂಟೆಯಿದ ಮಧ್ಯಾಹ್ನ 02 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.

ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಸ್.ಎಸ್.ಎಲ್.ಸಿಮ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಲೂಕಾಡಳಿತದಿಂದ ದೇವರ ದಾಸಿಮಯ್ಯ ಜಯಂತ್ಯೋತ್ಸವ ಆಚರಣೆ



ಸಿರುಗುಪ್ಪ,ಮಾ.24-

ನಗರದ ತಾಲೂಕು ಕಛೇರಿಯಲ್ಲಿ ತಾಲೂಕಾಡಳಿತ ಹಾಗೂ ಪದ್ಮಶಾಲಿ, ಸ್ವಕುಳಶಾಲಿ, ಕುರುಹಿನಶೆಟ್ಟಿ, ತೊಗಟವೀರ, ದೇವಾಂಗ ಮತ್ತು ನೇಕಾರ ಸಮುದಾಯಗಳ ಒಕ್ಕೂಟದ ವತಿಯಿಂದ ನಡೆದ ದೇವರ ದ ಾ ಸಿ ವ ' ು ಯ ್ಯ ಜಯಂತ್ಯೋತ್ಸವವನ್ನು ಶಿರಸ್ತೆದಾರ ಸಿದ್ದಾರ್ಥ್ ಕಾರಂಜಿಯವರು ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು ದೇವರ ದಾಸಿಮಯ್ಯನವರು ಉತ್ತಮ ನಡತೆ, ನೀತಿ, ನ್ಯಾಯ, ಧರ್ಮ ಹಾಗೂ ಜೀವನದ ಮೂಲ ಉದ್ದೇಶವನ್ನು ತಮ್ಮ ವಚನಗಳಲ್ಲಿ ಉಲ್ಲೇಸುತ್ತಾ ನೇಯ್ಗೆ ಕಾಯಕದ ಮೂಲಕ ಶಿವನನ್ನು ಒಲಿಸಿಕೊಂಡು ದೇವರ ದಾಸಿಮಯ್ಯನೆಂದು ಪ್ರಖ್ಯಾತಿಯಾಗಿದ್ದಾರೆ.

ಅವರಂತೆ ಸಮಾಜ ಹಿತಚಿಂತನೆಯ ಮಾರ್ಗದಲ್ಲಿ ನಮ್ಮೆಲ್ಲರಿಗೆ ಆದರ್ಶರಾಗಿರುವ ಸಂತರು, ದಾರ್ಶನಿಕರು, ಶರಣರ ತತ್ವಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಜೀವನವನ್ನು ನಡೆಸೋಣವೆಂದು ತಿಳಿಸಿದರು.

ಪದ್ಮಶಾಲಿ, ಸ್ವಕುಳಶಾಲಿ, ಕುರುಹಿನಶೆಟ್ಟಿ, ತೊಗಟವೀರ, ದೇವಾಂಗ ಮತ್ತು ನೇಕಾರ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ಬಿ.ಸತ್ಯನಾರಾಯಣ ಅವರು ಮಾತನಾಡಿ ಚೈತ್ರಶುದ್ದ ಪಂಚಮಿಯಂದು ಯಾದಗಿರಿ ಜಿಲ್ಲೆಯ ಮುದನೂರು ಗ್ರಾಮದಲ್ಲಿ ಜನಿಸಿದ ದೇವರ ದಾಸಿಮಯ್ಯ ಅವರು ಭಗವಂತನ ಅನುಕರಣೆಯೊಂದಿಗೆ ಶಿವ ಪರಮಾತ್ಮನನ್ನು ಒಲಿಸಿ ಕೊಂಡಿದ್ದಾರೆ.

176ಕ್ಕೂ ಅಧಿಕ ವಚನಗಳನ್ನು ಬರೆದಿರುವ ಅವರ ಅಂಕಿತ ನಾಮ ರಾಮನಾಥ ಎಂಬುದಾಗಿದೆ. ನೇಯ್ಗೆ ವೃತ್ತಿಯ ಮೂಲಕ ಹಲವು ಜೀವನದ ಸಾರಾಂಶವನ್ನು ತಿಳಿಸಿದ ಇವರು ನಮ್ಮ ನೇಯ್ಗೆ ಸಮುದಾಯಗಳ ಆರಾಧ್ಯ ದೇವ ಪುರುಷರಾಗಿದ್ದಾರೆಂದು ತಿಳಿಸಿದರು.

ಇದೇ ವೇಳೆ ನೇಯ್ಗೆ ಒಕ್ಕೂಟ ಸಮುದಾಯಗಳ ಗೌರವಾಧ್ಯಕ್ಷ ಶಿವಶಂಕರ ರೋಖಡೆ, ವ'ುುಖಂಡ'ರ'ುಗ'ಳಾದ ಶ್ರೀರಾಮುಲು, ಶರಣಪ್ಪ, ರಮೇಶ, ಗೋಪಾಲಕೃಷ್ಣ, ವೆಂಕಟೇಶ, ರಾಧಾದೇವಿ, ಲಕ್ಷ್ಮಿ ಸೇರಿದಂತೆ ಇನ್ನಿತರರು ಇದ್ದರು.

ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ : ಪ್ರಭುರೆಡ್ಡಿ



ಚಿತ್ತಾಪುರ,ಮಾ.24-

ಬೇಸಿಗೆ ಶುರುವಾಗುತ್ತಿದ್ದಂತೆ ನೀರಿನ ಸಮಸ್ಯೆಯು ಹೆಚ್ಚುತ್ತದೆ. ಹೀಗಾಗಿ ಎಲ್ಲೆಲ್ಲಿ ನೀರಿನ ಸಮಸ್ಯೆ ಇದೆ ಎನ್ನುವ ಕುರಿತು ಮುನ್ನೆಚ್ಚರಿಕೆ ವಹಿಸಿ ಎಂದು ಸೇಡಂ ಎಸಿ ಪ್ರಭುರೆಡ್ಡಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ಪ್ರಜಾಸೌಧದ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಹಮ್ಮಿಕೊಂಡಿದ್ದ ಅಧಿಕಾರಿಗಳ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ನೀರಿನ ಸಮಸ್ಯೆಗಳು ಇರುತ್ತವೆ. ಆದ್ದರಿಂದ ಅಧಿಕಾರಿಗಳಾದವರು ಕೂಡಲೇ ಎಲ್ಲೆಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿವೆ ಎನ್ನುವ ಪಟ್ಟಿಮಾಡಿಕೊಂಡು ಸ್ಥಳಕ್ಕೆ ಭೇಟಿ ನೀಡುವುದರ ಮೂಲಕ ಸಮಸ್ಯೆ ಬಗೆಹರಿಸಿ ಎಂದರು.

ಈ ವೇಳೆಯಲ್ಲಿ ತಹಶೀಲ್ದಾರ್ ನಾಗಯ್ಯ ಹಿರೇಮಠ, ಗ್ರೇಡ್-2 ತಹಶೀಲ್ದಾರ್ ರಾಜಕುಮಾರ ಮರತೂರಕರ್, ಪುರಸಭೆ ಮುಖ್ಯಾಧಿಕಾರಿ ಮನೋಜಕುಮಾರ ಗುರಿಕಾರ್, ಪಶು ಸಂಗೋಪನಾ ಇಲಾಖೆ ಅಧಿಕಾರಿ ಶಂಕರ ಕಣ್ಣಿ, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಸಂಜೀವಕುಮಾರ್ ಮಾನಕರ್, ಕಂದಾಯ ಇಲಾಖೆಯ ಅಧಿಕಾರಿಗಳು, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಸೇರಿದಂತೆ ಇತರರು ಇದ್ದರು.

ಬಾಬೂಜೀ, ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯೋತ್ಸವ ಅದ್ದೂರಿ ಆಚರಣೆಗೆ ಜಿಲ್ಲಾಡಳಿತ ಸನ್ನದ್ಧ-ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್



ಬಳ್ಳಾರಿ,ಮಾ.24-

ಹಸಿರು ಕ್ರಾಂತಿ ಹರಿಕಾರ, ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ ರಾಂ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಈ ಇಬ್ಬರು ಮಹನೀಯರ ಜಯಂತ್ಯೋತ್ಸವ ಕಾರ್ಯಕ್ರಮಗಳನ್ನು ಅದ್ದೂರಿಯಾಗಿ ಆಚರಿಸಲು ಜಿಲ್ಲಾಡಳಿತ ಸನ್ನದ್ಧವಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಕಚೇರಿ ಸಭಾಂಗಣದಲ್ಲಿ ಡಾ.ಬಾಬು ಜಗಜೀವನ್ ರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ರವರ ಜಯಂತಿ ಆಚರಣೆ ಕುರಿತು ಸೋಮವಾರ ಏರ್ಪಡಿಸಿದ್ದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಕೇಂದ್ರದಲ್ಲಿ ಏ.05 ರಂದು ಭಾರತದ ಮಾಜಿ ಉಪ ಪ್ರಧಾನಮಂತ್ರಿ ಹಾಗೂ ಹಸಿರುಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನ ರಾಂ ಅವರ 119ನೇ ಜಯಂತ್ಯೋತ್ಸವ ಮತ್ತು ಏ.14 ರಂದು ಭಾರತ ರತ್ನ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135 ನೇ ಜಯಂತ್ಯೋತ್ಸವ ಕಾರ್ಯಕ್ರಮಗಳನ್ನು ಈ ಬಾರಿ ಜಿಲ್ಲಾಡಳಿತದಿಂದ ವಿವಿಧ ಸಂಘಟನೆಗಳ ಸಹಯೋಗದಲ್ಲಿ ಅದ್ದೂರಿ ಆಚರಿಸಲಾಗುವುದು. ಇದಕ್ಕೆ ಬೇಕಾದ ಸಕಲ-ಸಿದ್ಧತೆ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಬಾರಿ ವಿಜೃಂಭಣೆಯಿಂದ ಆಚರಿಸಲು ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಸಮಿತಿ ರಚಿಸಲಾಗುವುದು. ಆಯಾ ಸಮಿತಿಗೆ ವಹಿಸಿದ ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿ ಜಯಂತಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು. ಜಯಂತಿ ದಿನದಂದು ಸರ್ಕಾರಿ ನೌಕರರು, ಅಧಿಕಾರಿ-ಸಿಬ್ಬಂದಿ ವರ್ಗ ಕಡ್ಡಾಯವಾಗಿ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ಶಿಷ್ಟಾಚಾರದನ್ವಯ ಆಹ್ವಾನ ಪತ್ರಿಕೆಗಳನ್ನು ಮುದ್ರಿಸಿ ಎಲ್ಲಾ ಗಣ್ಯರಿಗೆ ಆಹ್ವಾನಿಸಲಾಗುವುದು. ಜಿಲ್ಲಾ ಕೇಂದ್ರದ ಪ್ರಮುಖ ಸರ್ಕಾರಿ ಕಚೇರಿಗಳಿಗೆ ವಿದ್ಯುತ್ ದೀಪಲಂಕಾರ ಮಾಡಲಾಗುವುದು. ಡಾ.ಬಾಬು ಜಗಜೀವನ್ ರಾಮ್ ಮತ್ತು ಡಾ.ಬಿ.ಆರ್.ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಯುವ ಸಮುದಾಯ ಮತ್ತು ಮಕ್ಕಳಿಗೆ ತಲುಪಿಸಲು ವಿಶೇಷ ಭಾಷಣಕಾರರಿಂದ ಉಪನ್ಯಾಸ ಆಯೋಜಿಸಲಾಗುವುದು. ಮಹನೀಯರ ಜಯಂತೋತ್ಸವ ಕಾರ್ಯಕ್ರಮಗಳ ಅಂಗವಾಗಿ ಶಾಲಾ-ಕಾಲೇಜುಗಳಲ್ಲಿ ಪ್ರಬಂಧ ಸ್ಪರ್ಧೆ ಆಯೋಜಿಸಲಾಗುವುದು ಎಂದರು.

ಜಯಂತಿ ಕಾರ್ಯಕ್ರಮ ದಿನದಂದು ವಿವಿಧ ಸಾಂಸ್ಕೃತಿಕ ಕಲಾತಂಡಗಳನ್ನೊಂಡು ನಡೆಯುವ ಮೆರವಣಿಗೆಯಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಸಹಕಾರದಲ್ಲಿ ಸ್ತಬ್ಧಚಿತ್ರಗಳನ್ನು ರೂಪಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಜಿಲ್ಲಾಧಿಕಾರಿಯವರು, ವೇದಿಕೆ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರಿಗೆ ಅಭಿನಂದಿಸಲು ಸನ್ಮಾನ ಕಾರ್ಯಕ್ರಮ ಹಾಗೂ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಬೇಕು ಎಂದು ತಿಳಿಸಿದರು.

★ಡಾ.ಬಾಬು ಜಗನ್‌ಜೀವನ್ ರಾಂ ಜಯಂತಿ:★

ಏ.05 ರಂದು ಮಾಜಿ ಉಪ ಪ್ರಧಾನಮಂತ್ರಿ ಹಾಗೂ ಹಸಿರು ಕ್ರಾಂತಿ ಹರಿಕಾರರಾದ ಡಾ.ಬಾಬು ಜಗಜೀವನ ರಾಂ ಅವರ ಜಯಂತಿ ಕಾರ್ಯಕ್ರಮವನ್ನು ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಏರ್ಪಡಿಸಲಾಗುವುದು. ಅಂದು ಬೆಳಿಗ್ಗೆ ಮೆರವಣಿಗೆ ನಡೆಯಲಿದ್ದು, ಮೆರವಣಿಗೆಯು ಮುನಿಸಿಪಲ್ ಕಾಲೇಜು ಮೈದಾನದಿಂದ ಆರಂಭವಾಗಿ ಗಡಿಗಿಚೆನ್ನಪ್ಪ ವೃತ್ತ-ಬೆಂಗಳೂರು ರಸ್ತೆ-ಬ್ರೂಸ್ ಪೇಟೆ ಪೊಲೀಸ್ ಠಾಣೆ ಮುಂಭಾಗ-ಜೈನ್ ಮಾರ್ಕೆಟ್ ರಸ್ತೆ-ಹೆಚ್.ಆರ್.ಗವಿಯಪ್ಪ ವೃತ್ತದಿಂದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದವರೆಗೆ ನಡೆಯಲಿದೆ.

★ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ:★

ಏ.14 ರಂದು ಭಾರತ ರತ್ನ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿ ಕಾರ್ಯಕ್ರಮವನ್ನು ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಲ್ಲಿ ಹಮ್ಮಿಕೊಳ್ಳಲಾಗುವುದು. ಅಂದು ಬೆಳಿಗ್ಗೆ ಮೆರವಣಿಗೆ ನಡೆಯಲಿದ್ದು, ಮೆರವಣಿಗೆಯು ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಆರಂಭಗೊಂಡು ಹೆಚ್.ಆರ್.ಗವಿಯಪ್ಪ ವೃತ್ತ-ಜೈನ್ ಮಾರ್ಕೆಟ್ ರಸ್ತೆ-ಬ್ರೂಸ್‌ಪೇಟೆ ಪೊಲೀಸ್ ಠಾಣೆ ಮುಂಭಾಗ-ಬೆಂಗಳೂರು ರಸ್ತೆ-ಗಡಿಗಿ ಚೆನ್ನಪ್ಪ ವೃತ್ತದ ಮಾರ್ಗವಾಗಿ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದ ವರೆಗೆ ನಡೆಯಲಿದೆ.

ಮೆರವಣಿಗೆಯಲ್ಲಿ ಎಲ್ಲಾ ಸಂಘ-ಸಂಸ್ಥೆಗಳ ಮುಖಂಡರು, ಪದಾಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಾರ್ವಜನಿಕರು ಒಳಗೊಂಡು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

ಮುಖಂಡರು ಮಾತನಾಡಿ, ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಬಳಿ ಇರುವ ಸಂವಿಧಾನ ಉದ್ಯಾನವನ ನಿರ್ವಹಣೆಗೆ ಕ್ರಮವಹಿಸಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ಒಂದನ್ನು ಗುರುತಿಸಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿ ಸ್ಥಾಪನೆಗೆ ಕ್ರಮವಹಿಸಬೇಕು ಎಂದು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಜಿಲ್ಲಾಧಿಕಾರಿಯವರು ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ಪ್ರತಿ ಮೂರು ತಿಂಗಳಿಗೊಮ್ಮೆ ನಿಯಮಿತವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಕುಂದು-ಕೊರತೆ ಸಭೆ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಇದೇ ವೇಳೆ ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್ ಮಂಜುನಾಥ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಾಷು ಮೋದಿನ್ ಸೇರಿದಂತೆ ಮಹಾನಗರ ಪಾಲಿಕೆಯ ಸದಸ್ಯರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.



ವಚನ ಸಾಹಿತ್ಯಕ್ಕೆ ದೇವರ ದಾಸಿಮಯ್ಯನವರ ಕೊಡುಗೆ ಅಪಾರವಾದದ್ದು: ಕರ್ಣಕುಮಾರ

ಕೊಪ್ಪಳ ಮಾ.24-

ವಚನ ಸಾಹಿತ್ಯಕ್ಕೆ ದೇವರ ದಾಸಿಮಯ್ಯನವರ ಕೊಡುಗೆ ಅಪಾರವಾಗಿದ್ದು, ವಚನಗಳ ಮೂಲಕ ಸಮಾಜಕ್ಕೆ ಮಾರ್ಗ ದರ್ಶನ ನೀಡಿದರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಅವರು ಹೇಳಿದರು.

ಸೋಮವಾರದಂದು ನಗರದ ಸಾಹಿತ್ಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಶ್ರೀ ದೇವರ ದಾಸಿಮಯ್ಯ ಅವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ದಾಸಿಮಯ್ಯ ಅವರ ವಚನಗಳು ಸರಳತೆ, ಸಮಾನತೆ ಹಾಗೂ ಭಕ್ತಿ ತತ್ವಗಳನನು ಸಾರುತ್ತವೆ. ಅವರು ಜಾತಿ ಬೇಧವನ್ನು ವಿರೋಧಿಸಿ, ಮಾನವೀಯ ಮೌಲ್ಯಗಳನ್ನು ಉತ್ತೇಜಿಸಿದ ಶ್ರೇಷ್ಠ ವಚನಕಾರರು. ಅವರ ಸಂದೇಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಅವರು ಹೇಳಿದರು.

ಗಂಗಾವತಿಯ ಮುರಹರಿ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕರಾದ ಸಾಹಿತಿ ಅಮರಮ್ಮ ಕೋಚಿ ಅವರು ದೇವರ ದಾಸಿಮಯ್ಯ ಅವರ ಕುರಿತು ನೀಡಿದ ವಿಶೇಷ ಉಪನ್ಯಾಸದಲ್ಲಿ ದಾಸಿಮಯ್ಯನವರು ಕನ್ನಡದ ಮೊದಲ ವಚನಕಾರರಲ್ಲಿ ಒಬ್ಬರು. ಇವರನ್ನು ವಚನ ಸಾಹಿತ್ಯದ ಆದ್ಯ ವಚನಕಾರ ಎಂದು ಕರೆಯಲಾಗುತ್ತದೆ. ಅಂದಿನ ಕಾಲದ ಜನರಲ್ಲಿದ್ದ ಮೂಢನಂಬಿಕೆ, ಮೇಲು-ಕೀಳು ಎಂಬ ಭೇದಭಾವವನ್ನು ಇವರು ತಮ್ಮ ಸರಳ ಮಾತುಗಳ ಮೂಲಕ ತಿದ್ದಿದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪ ತಹಶೀಲ್ದಾರ್ ಗವಿಸಿದ್ದಪ್ಪ ಹಾಗೂ ನೇಕಾರ ಸಮುದಾಯದ ಅಧ್ಯಕ್ಷರಾದ ಶಿವಶಂಕರಪ್ಪ ಚೆನ್ನಿ, ಶಿವಶಂಕರಪ್ಪ ಕರಡಕಲ ಹಾಗೂ ಸಮಾಜ ಬಂಧುಮಿತ್ರರು ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮೊದಲು ನಗರದ ಗೌರಿಶಂಕರ ದೇವಸ್ಥಾನ ಆವರಣದಿಂದ ಸಾಹಿತ್ಯ ಭವನದವರೆಗೆ ಶ್ರೀ ದೇವರ ದಾಸಿಮಯ್ಯ ಅವರ ಭಾವಚಿತ್ರದ ಮೆರವಣಿಗೆ ಜರುಗಿತು.



ದೇವರ ದಾಸಿಮಯ್ಯ ವಚನ ಸಾಹಿತ್ಯದ ಆದ್ಯ ಪ್ರವರ್ತಕ-ಚಂದ್ರಕಾಂತ ಪೂಜಾರಿ

ಬೀದರ, ಮಾ.24-

ದಾಸಿಮಯ್ಯನವರು ಕನ್ನಡದ ಮೊದಲ ವಚನಕಾರರಲ್ಲಿ ಒಬ್ಬರು ಇವರನ್ನು ವಚನ ಸಾಹಿತ್ಯದ 'ಆದ್ಯ ವಚನಕಾರ ಎಂದು ಕರೆಯಲಾಗುತ್ತದೆಂದು ಹೆಚ್ಚುವರಿ ಪೊಲೀಸ್ ವರೀಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ ಹೇಳಿದರು. ಅವರು. ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ನಗರದ ಪೂಜ್ಯ ಡಾ. ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಆಯೋಜಿಸಿದ ದೇವರ ದಾಸಿಮಯ್ಯ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅಂದಿನ ಕಾಲದ ಜನರಲ್ಲಿ ಇದ್ದ ಮೂಢನಂಬಿಕೆಗಳನ್ನು ಮತ್ತು ಮೇಲು-ಕೀಳು ಎಂಬ ಭೇದಭಾವವನ್ನು ಇವರು ತಮ್ಮ ಸರಳವಾದ ಮಾತುಗಳ ಮೂಲಕ ತಿದ್ದಿದರು. ದೇವರಿಗೆ ಜಾತಿ ಇಲ್ಲ, ಭಕ್ತಿಯೇ ಮುಖ್ಯ ಎಂದು ಸಾರಿದ ಇವರು, ಹೆಣ್ಣು-ಗಂಡು ಎಂಬ ವ್ಯತ್ಯಾಸ ಮಾಡದೆ ಎಲ್ಲರಿಗೂ ಸಮಾನ ಗೌರವ ಸಿಗಬೇಕು ಎಂದು ಹಂಬಲಿಸಿದ ಕ್ರಾಂತಿಕಾರಿ ಪುರುಷರಾಗಿದ್ದಾರೆ. ಬಸವಣ್ಣನವರಿಗಿಂತ ಮೊದಲೇ ವಚನ ಕ್ರಾಂತಿಗೆ ನಾಂದಿ ಹಾಡಿದ ದಾಸಿಮಯ್ಯನವರ ಕೊಡುಗೆ ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ಲೋಕಕ್ಕೆ ಅಪಾರವಾದುದು.? ವೃತ್ತಿಯಿಂದ ನೇಕಾರರಾಗಿದ್ದ ಇವರು, ಶ್ರಮಜೀವನದ ಮಹತ್ವವನ್ನು ಸಾರಿದವರು. ಅಜ್ಞಾನದ ಕತ್ತಲನ್ನು ಕಳೆದು ಜ್ಞಾನದ ಬೆಳಕನ್ನು ನೀಡುವ ಇವರ ಚಿಂತನೆಗಳು ಸಮಾಜದಲ್ಲಿ ಸಮಾನತೆ ಮತ್ತು ಭಕ್ತಿಯ ಮಾರ್ಗವನ್ನು ತೋರಿವೆ ಎಂದರು.

ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಬಸವ ಸೇವಾ ಪ್ರತಿಷ್ಠಾದ ಅಧ್ಯಕ್ಷ ಡಾ. ಗಂಗಾಂಬಿಕ ಅಕ್ಕಾ, ಕಲಬುರ್ಗಿ ಜಿಲ್ಲೆಯ ಸುರಪುರ ತಾಲೂಕಿನ ಮುದನೂರಿನಲ್ಲಿ ಜನಿಸಿದ ದೇವರ ದಾಸಿಮಯ್ಯನವರು 'ರಾಮನಾಥ' ಅಂಕಿತದೊಂದಿಗೆ ಸರಳ ಮತ್ತು ವೈಚಾರಿಕವಾಗಿ 176ಕ್ಕೂ ಹೆಚ್ಚು ವಚನಗಳನ್ನು ರಚಿಸಿದ್ದಾರೆ. ಸಮಾನತೆಯ ತತ್ವ ಸಾರಿದ ದಾಸಿನಯ್ಯನವರು ಪ್ರೀತಿಯೇ ಸಂಪತ್ತು ಎಂದು ಬದುಕಿದ್ದವರು. ತಮ್ಮ ಬದುಕಿನುದ್ದಕ್ಕೂ ಬೇಟೆಗಾರರು ಸೇರಿದಂತೆ ಅನೇಕರ ಮನಪರಿವರ್ತನೆ ಮಾಡಿದ್ದಾರೆ. ದೇವರ ದಾಸಿಮಯ್ಯನವರ ಪತ್ನಿ ದುಗ್ಗಳೆ ಕೂಡ ಮಹಾಸಾಧ್ವಿ ಮತ್ತು ಅನ್ಯೋನ್ಯ ದಾಂಪತ್ಯ ಜೀವನ ನಡೆಸುತ್ತಿದ್ದ ಶರಣೆ. ಎಲ್ಲರೂ ದಾಸಿಮಯ್ಯ ಅವರ ವಚನಗಳನ್ನು ಪಠಣ ಮಾಡಬೇಕು ಹಾಗೂ ಅವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಬೇಕೆಂದರು.

ವೇದಿಕೆ ಕಾರ್ಯಕ್ರಮ ಮುಂಚಿತವಾಗಿ ದೇವರ ದಾಸಿಮಯ್ಯ ಭಾವಚಿತ್ರ ಮೆರವಣಿಗೆ ನಗರದ ಗಣೇಶ್ ಮೈದಾನದಿಂದ ಪ್ರಾರಂಭವಾಗಿ ಹರಳಯ್ಯ ವೃತ್ತ, ಶಿವಾಜಿ ವೃತ್ತ, ಭಗತ್ ಸಿಂಗ್ ವೃತ್ತ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ರೋಟರಿ ವೃತ್ತ ಮಾರ್ಗದಿಂದ ಸಾಗಿ ಪೂಜ್ಯ ಡಾ. ಚನ್ನಬಸವ ಪಟ್ಟದೇವರ ರಂಗಮಂದಿಕ್ಕೆ ತಲುಪಿತು. ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ., ಪಿಯುಸಿ ಪರೀಕ್ಷೆಯಲ್ಲಿ ಗರಿಷ್ಠ ಅಂಕ ಪಡೆದು ಪಾಸಾದ ವಿದ್ಯಾರ್ಥಿಗಳಿಗೆ, ನಿವೃತ್ತ ಸರ್ಕಾರಿ ನೌಕರರಿಗೆ ಹಾಗೂ ಸಮಾಜಕ್ಕೆ ಕೊಡುಗೆ ನೀಡಿದವರಿಗೆ ವಿಶೇಷವಾಗಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಡಳಿತ ಕಚೇರಿಯ ಸಹಾಯಕ ನಿರ್ದೇಶಕ ಸೋಮಶೇಖರ್ ಮಡಕಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜಶೇಖರ ಒಟಗೆ, ಸಮಾಜದ ಪ್ರಮುಖರಾದ ರಾಮಕೃಷ್ಣ ಸಾಳೆ, ಪ್ರಶಾಂತ್ ಸೇಂದ್ರೆ, ಮಾಧವ ಚೌಡೇಕರ್, ಅಶೋಕ್ ಎಲ್ಲಿ, ನಾಗಪ್ಪ ಜಂಬಗಿ, ಸೋಮಶೇಖರ್ ಅಮಲಾಪುರ, ಕೋಟೆ ವಿಶ್ವನಾಥ್, ಅನುರಾಧ ಚಂದಾ ಸೇರಿದಂತೆ ನೇಕಾರ ಸಮಾಜ ಬಂಧುಗಳು ಉಪಸ್ಥಿತರಿದ್ದರು.

ದೇವರ ದಾಸಿಮಯ್ಯನವರ ಪವಾಡ ಇವತ್ತಿಗೂ ಜೀವಂತ ಸಾಕ್ಷಿಯಾಗಿದೆ - ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ



ಕಲಬುರಗಿ, ಮಾ.24-

ದೇವರ ದಾಸಿಮಯ್ಯನವರ ಪವಾಡ ಇವತ್ತಿಗೂ ಜೀವಂತ ಸಾಕ್ಷಿಯಾಗಿದೆ. ಮುದನೂರಿಗೆ ಹೋಗಿ ನೋಡಿ, ಏಳು ತೀರ್ಥಗಳಿಂದ ಪುಟಿದೇಳುವ ನೀರು ಇವತ್ತಿಗೂ ಹರಿಯುತ್ತದೆ, ಬರಗಾಲದಲ್ಲೂ ಅದು ಬತ್ತುವುದಿಲ್ಲ. ಎಂದು ಕಲಬುರಗಿ ದಕ್ಷಿಣ ಶಾಸಕರಾದ ಅಲ್ಲಮಪ್ರಭು ಪಾಟೀಲ ಹೇಳಿದರು.

ಸೋಮವಾರ ನಗರದ ಡಾ. ಎಸ್.ಎಂ. ಪಂಡಿತ್ ರಂಗಮಂದಿರದಲ್ಲಿ ಕಲಬುರಗಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ದೇವರ ದಾಸಿಮಯ್ಯ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ದಾಸಿಮಯ್ಯನವರು ಅಪ್ಪಟ ಶಿವಭಕ್ತರು. ಒಮ್ಮೆ ಭೀಕರ ಬರಗಾಲ ಬಂದಾಗ ಇವರು ದಾಸೋಹ ನಡೆಸಲು ಹರಸಾಹಸ ಪಟ್ಟ ಕಥೆಗಳು ಅವರ ಜೀವನ ಚರಿತ್ರೆಯಲ್ಲಿ ಬರುತ್ತವೆ. ಇವರು ಸರಳ ಕನ್ನಡದಲ್ಲಿ ಗಹನವಾದ ತತ್ವಗಳನ್ನು ವಚನಗಳನ್ನು ಸಾಮಾನ್ಯ ಜನರಿಗೆ ಮುಟ್ಟಿಸಿದರು ಎಂದು ಮೊಲೆ ಬಂದಡೆ ಹೆಣ್ಣೆಂಬರು, ಗಡ್ಡ ಮೀಸೆ ಬಂದಡೆ ಗಂಡೆಂಬರು, ನಡುವೆ ಸುಳಿವ ಆತ್ಮನು ಹೆಣ್ಣೂ ಅಲ್ಲ ಗಂಡೂ ಅಲ್ಲ ಕಾಣಾ ರಾಮನಾದ ಎಂಬ ವಚನ ಸ್ಮರಿಸಿದರು.

ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಐಟಿಬಿಟಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಪ್ರಿಯಾಂಕ್ ಖರ್ಗೆ ಅವರು ಹೇಳಿದ್ದಾರೆ, ನೀವು ಎಸ್ಟಿಮೇಟ್ ತಯಾರು ಮಾಡಿಕೊಂಡು ಬನ್ನಿ, ಜಾಗ ಕೊಡಿಸಿ ನೇಕಾರರ ಭವನ ಮಾಡಿಕೊಡುತ್ತೇವೆ ಎಂದಿದ್ದಾರೆ, ನಾನು ಕೂಡ ಶಾಸಕನಾಗಿ ನನ್ನ ಅನುದಾನದಿಂದ ಹಣವನ್ನು ನೀಡುತ್ತೇನೆ. ನಿಮ್ಮ ಧ್ವನಿಯಾಗಿ ವಿಧಾನಸೌಧದಲ್ಲಿ ನಾನು ಇರುತ್ತೇನೆ. ಇಂತಹ ಪುಣ್ಯಾತ್ಮರ ಜಯಂತಿಯನ್ನು ಅರ್ಥಪೂರ್ಣವಾಗಿ ಮಾಡುತ್ತಿದ್ದೀರಿ. ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಅರುಣುಕುಮಾರ ಎಂ.ವೈ. ಪಾಟೀಲ ಅವರು ಈ ಹಿಂದೆ ಬೈರಾಮಡಿಗೆಯಂತಹ ಗ್ರಾಮಗಳಲ್ಲಿ ನೂಲಿನ ಕೆಲಸಗಳು ವ್ಯಾಪಕವಾಗಿದ್ದವು. ಆದರೆ ಕಾಲಾನಂತರದಲ್ಲಿ ಯಂತ್ರೋಪಕರಣಗಳ ಬಳಕೆಯಿಂದ ಈ ವೃತ್ತಿ ಕಮ್ಮಿಯಾಗಿದ್ದು, ಜನರು ಶಿಕ್ಷಣ ಪಡೆದು ವಿವಿಧ ಕ್ಷೇತ್ರಗಳತ್ತ ಮುಖ ಮಾಡಿದ್ದಾರೆ ಎಂದು ಸ್ಮರಿಸಿದರು.

ಬಸವಾದಿ ಶರಣರ ಮತ್ತು ದೇವರ ದಾಸಿಮಯ್ಯನವರ ವಚನಗಳ ಆದರ್ಶದಂತೆ ಸಮಾಜವು ಸಂಘಟಿತವಾಗಿ ಶಕ್ತಿಯುತವಾಗಬೇಕು ಹಾಗೂ ಸಮಾಜದ ಪ್ರತಿಯೊಂದು ಕಾರ್ಯಕ್ಕೂ ತಾವು ಸದಾ ಬೆನ್ನೆಲುಬಾಗಿ ನಿಲ್ಲುವುದಾಗಿ ಭರವಸೆ ನೀಡಿದರು.

ಮಾಜಿ ಶಾಸಕರು ಮತ್ತು ಸಂಸ್ಥಾಪಕ ಅಧ್ಯಕ್ಷರು ಕರ್ನಾಟಕ ರಾಜ್ಯ ನೇಕಾರ ಸಮುದಾಯಗಳ ಒಕ್ಕಟ್ಟ ಬೆಂಗಳೂರು ಎಮ್.ಡಿ. ಲಕ್ಷ್ಮೀನಾರಾಯಣ ಅವರು ಮಾತನಾಡಿ ನೇಕಾರರ ಶಕ್ತಿ ಕೇವಲ ಮತಕ್ಕೆ ಸೀಮಿತವಾಗದೆ, ಅವರ ಆರ್ಥಿಕ ಮತ್ತು ಸಾಮಾಜಿಕ ಸುಧಾರಣೆಗೆ ಸರ್ಕಾರ ಒತ್ತು ನೀಡಬೇಕು ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ಜಿಲ್ಲಾ ಕೇಂದ್ರವಾದ ಕಲಬುರಗಿಯಲ್ಲಿ ಸಮುದಾಯದ ಚಟುವಟಿಕೆಗಳಿಗಾಗಿ ಸುಸಜ್ಜಿತ 'ನೇಕಾರ ಭವನ' ನಿರ್ಮಿಸಬೇಕು. ಇದಕ್ಕೆ ಶಾಸಕರು ತಮ್ಮ ಶಕ್ತಿಯನ್ನು ಬಳಸಿ ಸರ್ಕಾರದಿಂದ ಅನುದಾನ ಕೊಡಿಸಬೇಕೆಂದು ಒತ್ತಾಯಿಸಲಾಯಿತು.

ಸಿದ್ಧಾಶ್ರಮ ವಿರಕ್ತ ಮಠ ಮೈಂದರಗಿಯ ಶ್ರೀ ಮ.ನಿ.ಪ್ರ. ಮೃತ್ಯುಂಜಯ ಮಹಾಸ್ವಾಮಿಗಳು ಅವರು ಮಾತನಾಡಿ, ದಾಸಿಮಯ್ಯನವರು ರಚಿಸಿದ 179 ವಚನಗಳನ್ನೇ ಆಧಾರವಾಗಿಟ್ಟುಕೊಂಡು 12ನೇ ಶತಮಾನದ ಶರಣರು ಕಾಯಕವೇ ಕೈಲಾಸ ಎಂದು ತಮ್ಮ ಜೀವನ ನಡೆಸಿದ್ದಾರೆ. ಭಕ್ತಿ ಯಾರಂತೆ ಮಾಡಬೇಕು ಅಂತ ಕೇಳಿದರೆ ದೇವರ ದಾಸಿಮಯ್ಯನವರಂತೆ ಭಕ್ತಿ ಮಾಡಬೇಕು ಎಂಬ ಮಾತನ್ನು ಬಸವಾದಿ ಶರಣರು ಹೇಳಿದ್ದಾರೆ.

ಹೆಣ್ಣು ಸಾಕ್ಷಾತ್ ಭಗವಂತಿ ಮತ್ತು ಪಾರ್ವತಿ ಸ್ವರೂಪಿ ಎಂಬ ಸಿದ್ಧರಾಮರ ಮಾತನ್ನು ಪುನರುಚ್ಚರಿಸುತ್ತಾ, ಹೆಣ್ಣು ಅಥವಾ ಗಂಡು ಎಂಬ ಭೇದವಿಲ್ಲದೆ ಎಲ್ಲರೊಳಗೂ ಇರುವ ಆತ್ಮ ಪರಮಾತ್ಮನ ಸ್ವರೂಪ ಎಂದು ದಾಸಿಮಯ್ಯನವರು ಸಾರಿದ್ದಾರೆ.

ಕಲಬುರಗಿ ಅನನ್ಯ ಪದವಿ ಮಹಾವಿದ್ಯಾಲಯ ಪ್ರಾಧ್ಯಾಪಕರಾದ ಡಾ. ಕರುಣಾ ಜಮದಾರಖಾನಿ, ಅವರು ವಿಶೇಷ ಉಪನ್ಯಾಸದ ಮೂಲಕ ದೇವರ ದಾಸಿಮಯ್ಯನವರ ಜೀವನ ಸಾರ, ವಚನಗಳ ಸಾರ, ಮುಂತಾದ ವಿಷಯಗಳ ಸಂಕ್ಷಿಪ್ತ ಮಾಹಿತಿ ತಿಳಿಸಿದರು.

ಸಮಾಜ ಸೇವೆ ಸಲ್ಲಿಸಿದ ಶಾಸಕರು ಮತ್ತು ಸಂಸ್ಥಾಪಕ ಅಧ್ಯಕ್ಷರು ಕರ್ನಾಟಕ ರಾಜ್ಯ ನೇಕಾರ ಸಮುದಾಯಗಳ ಒಕ್ಕಟ್ಟ ಬೆಂಗಳೂರು, ಮಹಿಳಾ ವಿಭಾಗದಿಂದ ರುಕ್ಕಿಣಿ ಗಣೇಶ ಸಂಗಾ ನೇಕಾರ ರತ್ನ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಅದೇ ರೀತಿ ಇನ್ನೂ ಎಂಟು ಜನರಿಗೆ ದೇವರ ದಾಸಿಮಯ್ಯ ಜೀವಮಾನ ಪ್ರಶಸ್ತಿ ನೀಡಿ ಸನ್ಮಾನಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ಎ. ನಾಸಿ ಅವರು ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ದೇವರ ದಾಸಿಮಯ್ಯ ಸಿದ್ಧಾರೂಢ ಮಠ, ಡಬರಾಬಾದ ಅಭಿನವ ರೇವಣಸಿದ್ಧ ಪಟ್ಟದೇವರು,ಜಿಲ್ಲಾಧಿಕಾರಿ ಕಚೇರಿ ಸಹಾಯಕರಾದ ಶಿವಪ್ರಭು ಹಿರೇಮಠ, ಕರ್ನಾಟಕ ಜಿಲ್ಲಾ ನೇಕರ ಸಂಘದ ಒಕ್ಕೂಟದ ಅಧ್ಯಕ್ಷ ಪ್ರದೀಪ ಗಣೇಶ ಸಂಗಾ, ಕಲಬುರ್ಗಿ ಜಿಲ್ಲಾ ನೇಕಾರ ಸಮುದಾಯಗಳ ಒಕ್ಕೂಟದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಸಮಿತಿ ಅಧ್ಯಕ್ಷರಾದ ಶಾಂತಕುಮಾರ್ ಆರ್. ಯಳಸಂಗಿ ಸೇರಿದಂತೆ ಸಮಾಜದ ಮುಖಂಡರು, ಸಾರ್ವಜನಿಕರು ಇತರರಿದ್ದರು.

ಒಂದನೇಯ ಪುಟದಿಂದ

ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿಗಳ ಸೂಚನೆ ಡಾ.ಬಾಬು ಜಗಜೀವನ್ ರಾಮ್ ಜಯಂತಿಗೆ ಅಗತ್ಯ ಸಿದ್ಧತೆಯಾಗಲಿ

ರಾಜು ಅವರು ಮನವಿ ಮಾಡಿದರು. ಬಾಬು ಜಗಜೀವನ ರಾಮ್ ಅವರ ಜಯಂತಿಗೆ ಸಮಾಜದವರು ಒಂದು ದಿನದ ಮಟ್ಟಿಗೆ ಆರ್‌ಟಿಓ, ಬಸವೇಶ್ವರ, ಅಂಬೇಡ್ಕರ್ ವೃತ್ತದಲ್ಲಿ ಬ್ಯಾನರ್ ಅಳವಡಿಕೆಗೆ ಅವಕಾಶ ನೀಡಬೇಕು ಎಂದು ಭೀಮಣ್ಣ ಮಂಚಾಲ ಅವರು ಮನವಿ ಮಾಡಿದರು.

ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಮ ಅವರ ಹೆಸರನ್ನಿಡಬೇಕು ಎಂದು ಸಮಾಜದ ಅನೇಕ ಗಣ್ಯರು ಸಭೆಯಲ್ಲಿ ಮನವಿ ಮಾಡಿದರು. ಈ ಬಗ್ಗೆ ಪರಿಶೀಲಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಪ್ರತಿಕ್ರಿಯಿಸಿದರು. ಜಯಂತಿ ಆಚರಣೆ ಹಿನ್ನೆಲೆಯಲ್ಲಿ ಏಪ್ರಿಲ್ 5ರಂದು ಮದ್ಯ ಮಾರಾಟ ನಿಷೇಧಿಸಬೇಕು ಎಂಬುದು ಸೇರಿದಂತೆ ಅನೇಕ ಗಣ್ಯರು ಸಭೆಗೆ ನಾನಾ ಸಲಹೆಗಳನ್ನು ನೀಡಿದರು.ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ ಕುಮಾರ್ ಅವರು ಹಿಂದಿನ ಸಭೆಯ ಸಭಾ ನಡಾವಳಿಯನ್ನು ಓದಿ ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ರಾಯಚೂರು ಮಹಾನಗರ ಪಾಲಿಕೆಯ ಸಮಿತಿ ಕಾರ್ಯದರ್ಶಿ ಹಾಗೂ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೃಷ್ಣಾ ಶಾವಂತಗೇರಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಸಂಘ,-ಸಸ್ಥೆಗಳ ಮುಖಂಡರು ಇದ್ದರು.

ತುಂಗಭದ್ರಾ ಕಾಲುವೆ ಕುಸಿತ ಭೀತಿ: ದುರಸ್ತಿ ಕೈಗೊಳ್ಳದಿದ್ದರೆ ಭಾರೀ ನಷ್ಟ- ಚಾಮರಾಸ ಮಾಲಿ ಪಾಟೀಲ್

ಬಹುದು ಎಂದು ಅವರು ತಿಳಿಸಿದರು.

ತುಂಗಭದ್ರಾ ಎಡದಂಡೆಯ ಕ್ರೆಸ್ಟ್ ಗೇಟ್ ಕಾಮಗಾರಿಗಳು ಇನ್ನೂ ಪೂರ್ಣಗೊಳ್ಳದಿರುವ ಹಿನ್ನೆಲೆ, ಅದಕ್ಕೂ ಮುನ್ನ ಕಾಲುವೆ ದುರಸ್ತಿ ಮಾಡುವುದು ಅತ್ಯವಶ್ಯಕ ಎಂದು ಅವರು ಒತ್ತಾಯಿಸಿದರು.

ಪರಿಸರ ವಿಚಾರದಲ್ಲಿಯೂ ಅವರು ಕಾಳಜಿ ವ್ಯಕ್ತಪಡಿಸಿ, ಜಿಲ್ಲೆಯಲ್ಲಿ ವೇಗವಾಗಿ ಹರಡುತ್ತಿರುವ ''ಕೋನ ಕಾರ್ಪಸ್'' ಗಿಡವನ್ನು ತಕ್ಷಣ ನಿರ್ಮೂಲನೆ ಮಾಡಬೇಕೆಂದು ಆಗ್ರಹಿಸಿದರು. ಭಾರತ ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ ಪರಿಸರಕ್ಕೆ ಹಾನಿಕಾರಕವಾಗಿರುವ ಇಂತಹ ಗಿಡಗಳನ್ನು ತೆರವುಗೊಳಿಸುವುದು ಕಡ್ಡಾಯವಾಗಿದ್ದು, ಜಿಲ್ಲಾಡಳಿತ ನಿರ್ಲಕ್ಷ್ಯ ತೋರಬಾರದು ಎಂದು ಹೇಳಿದರು.

ಇನ್ನು ಜೋಳ ಖರೀದಿ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಅವರು, ಅನಧಿಕೃತ ಜಿಪಿಎಸ್ ಅರ್ಜಿಗಳನ್ನು ತೆರವುಗೊಳಿಸುವ ವೇಳೆ ನಿಜವಾದ ರೈತರ ಅರ್ಜಿಗಳನ್ನೂ ರದ್ದುಪಡಿಸಲಾಗಿದೆ ಎಂದು ಆರೋಪಿಸಿದರು. ಜಾನೇಕಲ್, ಬ್ಯಾಗವಾಡ, ಬಾಗಲವಾಡ ಸೇರಿದಂತೆ ಹಲವು ಗ್ರಾಮ ಪಂಚಾಯಿತಿಗಳಲ್ಲಿ ಅಧಿಕಾರಿಗಳ ನಿರ್ಲಕ್ಷ್ಯದಿಂದ ರೈತರಿಗೆ ಅನ್ಯಾಯವಾಗಿದೆ ಎಂದು ಹೇಳಿದರು.

ಈಗಾಗಲೇ ಸಾವಿರಾರು ಅನಧಿಕೃತ ಪ್ರಕರಣಗಳನ್ನು ತೆರವುಗೊಳಿಸಿದರೂ ನಿಜವಾದ ರೈತರಿಗೆ ನ್ಯಾಯ ದೊರೆಯದೇ ಇದ್ದರೆ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಭೂದಯ್ಯ ಸ್ವಾಮಿ, ದೇವರಾಜ್, ಸಿದ್ದಯ್ಯ ಸ್ವಾಮಿ, ಬಸವರಾಜ್, ಮಲ್ಲಣ್ಣ, ಲಕ್ಷ್ಮಣ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅನುದಾನ ದುರುಪಯೋಗ ಆರೋಪ: ಅಧ್ಯಕ್ಷ ಅಜಯ್ ಸಿಂಗ್ ರಾಜೀನಾಮೆಗೆ ಆಗ್ರಹ -ರಾಘವೇಂದ್ರ ಕುಷ್ಟಗಿ

ಆದೇಶವನ್ನು ಉಲ್ಲಂಘಿಸಿದೆ ಎಂಬುದೂ ಆರೋಪಗಳಲ್ಲಿದೆ. 03/12/2025ರ ಸರ್ಕಾರದ ಆದೇಶದಂತೆ (.) ಸಂಸ್ಥೆಯನ್ನು ತಪಾಸಣೆಗಾಗಿ ನೇಮಕ ಮಾಡಲು ಸೂಚನೆ ನೀಡಲಾಗಿದ್ದರೂ ಅದನ್ನು ಪಾಲಿಸಿಲ್ಲ ಎಂದರು.

ಇತ್ತೀಚೆಗೆ ನಡೆದ ಬೆಳಗಾವಿ ಅಧಿವೇಶನದಲ್ಲಿಯೂ ಮಂಡಳಿಯ ಕಳಪೆ ಕಾಮಗಾರಿಗಳ ಕುರಿತು ತೀವ್ರ ಚರ್ಚೆ ನಡೆದಿದ್ದು, ಸರ್ಕಾರದ ಮಾನ ಹರಾಜಾಗುವಂತ ಪರಿಸ್ಥಿತಿ ನಿರ್ಮಾಣವಾಗಿದೆ. ಒಂದು ದಶಕದಿಂದ ಮಂಡಳಿ ಅಸ್ತಿತ್ವದಲ್ಲಿದ್ದರೂ ಸಾವಿರಾರು ಕೋಟಿ ರೂ. ಅನುದಾನ ಕಳಪೆ ಕಾಮಗಾರಿಗಳಿಂದ ಹಾಳಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇಷ್ಟೊಂದು ಗಂಭೀರ ಆರೋಪಗಳ ನಡುವೆಯೂ ಕಲ್ಯಾಣ ಕರ್ನಾಟಕ ಭಾಗದ ಸಚಿವರು, ಶಾಸಕರು, ಸಂಸದರು ಹಾಗೂ ವಿಧಾನ ಪರಿಷತ್ ಸದಸ್ಯರು ಮೌನ ವಹಿಸಿರುವುದು ಅನುಮಾನಗಳಿಗೆ ಕಾರಣವಾಗಿದೆ. ಈ ಕುರಿತು ಸಚಿವರಾದ ಪ್ರಿಯಾಂಕ ಖರ್ಗೆ, ಶರಣ ಪ್ರಕಾಶ ಪಾಟೀಲ್ ಮತ್ತು ಎನ್.ಎಸ್. ಬೋಸರಾಜ ಅವರು ತಕ್ಷಣ ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು.

371ಜೆ ಅಡಿಯಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ರೂಪಿಸಿದ ಯೋಜನೆಗಳು ನಿರ್ಲಕ್ಷ್ಯ ಮತ್ತು ಅಕ್ರಮಗಳಿಂದ ಹಿನ್ನಡೆಯಾಗುತ್ತಿವೆ ಎಂದು ಆರೋಪಿಸಿ, ಸಂಬಂಧಪಟ್ಟವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿ. ಬಸವರಾಜ್, ಅಸ್ಲಾಂ, ಜಾನ್ ವೆಸ್ಲಿ, ಭೀಮರಾಯ ಹದಿನಳ್ ಉಪಸ್ಥಿತರಿದ್ದರು.

ಮಹಿಳಾ ನೌಕರರ ಆರೋಗ್ಯವೇ ಸಶಕ್ತ ಆಡಳಿತದ ಅಡಿಪಾಯ: ಜಿಲ್ಲಾಧಿಕಾರಿ ಪ್ರತಿಪಾದನೆ



ವಿಜಯನಗರ,ಮಾ.24-

ಮಹಿಳಾ ನೌಕರರು ಕಚೇರಿ ಕೆಲಸ ಮತ್ತು ಮನೆಯ ಜವಾಬ್ದಾರಿಗಳೆರಡನ್ನೂ ಸಮರ್ಥವಾಗಿ ನಿಭಾಯಿಸುತ್ತಿದ್ದಾರೆ. ಆದರೆ ಕಚೇರಿ ಕೆಲಸದ ಒತ್ತಡದ ಓಟದಲ್ಲಿ ತಮ್ಮ ಆರೋಗ್ಯದ ಕಡೆಗೆ ಗಮನಹರಿಸುತ್ತಿಲ್ಲ. ಆರೋಗ್ಯವಂತ ನೌಕರರಿಂದ ಮಾತ್ರ ಸಾರ್ವಜನಿಕರಿಗೆ ಉತ್ತಮ ಸೇವೆ ನೀಡಲು ಸಾಧ್ಯ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಇನ್ನರ್ ವ್ಹೀಲ್ ಕ್ಲಬ್ ಆಫ್ ಹೊಸಪೇಟೆ ಹಾಗೂ ಆಯುಷ್ ಇಲಾಖೆ ಸಹಯೋಗದೊಂದಿಗೆ ಸೋಮವಾರ ರೋಟರಿ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್‌ನ ಮಹಿಳಾ ಸಿಬ್ಬಂದಿಗಳಿಗೆ ಆಯೋಜಿಸಲಾಗಿದ್ದ ಮಹಿಳಾ ನೌಕರರಿಗೆ ವಿಶೇಷ ವೈದ್ಯಕೀಯ ತಪಾಸಣೆ ಶಿಬಿರ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಈ ನಿಟ್ಟಿನಲ್ಲಿ ನೌಕರರು ಕನಿಷ್ಠ ಆರು ತಿಂಗಳಿಗೊಮ್ಮೆ ಸಮಗ್ರ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದ ಅವರು, ಕೆಲಸದ ಒತ್ತಡವು ದೈಹಿಕ ಕಾಯಿಲೆಗಳಿಗಿಂತ ಮಾನಸಿಕ ನೆಮ್ಮದಿಯನ್ನು ಹಾಳು ಮಾಡುತ್ತದೆ. ಆದ್ದರಿಂದ ಪ್ರತಿಯೊಬ್ಬ ಮಹಿಳಾ ನೌಕರರು ದಿನದ ಅರ್ಧ ಗಂಟೆಯನ್ನಾದರೂ ಯೋಗ, ಧ್ಯಾನಕ್ಕೆ ಮೀಸಲಿಡಬೇಕು. ಇದರಿಂದ ರಕ್ತದೊತ್ತಡ ಮತ್ತು ಮಧುಮೇಹದಂತಹ ಕಾಯಿಲೆ ನಿಯಂತ್ರಿಸಬಹುದು. ಇತ್ತೀಚಿನ ದಿನಗಳಲ್ಲಿ ಮಹಿಳೆಯರಲ್ಲಿ ಕಾಣಿಸಿಕೊಳ್ಳುತ್ತಿರುವ ಕ್ಯಾನ್ಸರ್ ಹಾಗೂ ಇತರ ಸ್ತ್ರೀಸಂಬಂಧಿ ಕಾಯಿಲೆಗಳ ಬಗ್ಗೆ ಮುನ್ನೆಚ್ಚರಿಕೆ ವಹಿಸಬೇಕು. ಆರೋಗ್ಯದಲ್ಲಿ ಏನಾದರೂ ಏರುಪೇರು ಉಂಟಾದಲ್ಲಿ ಯಾವುದೇ ಮುಜುಗರವಿಲ್ಲದೇ ತಜ್ಞ ವೈದ್ಯರಲ್ಲಿ ಸಮಾಲೋಚನೆ ನಡೆಸಬೇಕು. ಆರಂಭಿಕ ಹಂತದಲ್ಲಿಯೇ ಕಾಯಿಲೆ ಪತ್ತೆಯಾದರೆ ಅದಕ್ಕೆ ತಕ್ಕ ಪರಿಹಾರ ಕಂಡುಕೊಳ್ಳು ಸಹಕಾರಿಯಾಗಲಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಇಂತಹ ವೈದ್ಯಕೀಯ ತಪಾಸಣಾ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿ ಹೇಳಿದರು. ಈ ವೇಳೆ ಇನ್ನರ್ ವ್ಹೀಲ್ ಕ್ಲಬ್ ಆಫ್ ಹೊಸಪೇಟೆ ಸಂಸ್ಥೆಯ ಅಧ್ಯಕ್ಷೆ ನೈಮಿಷಾ, ಕಾರ್ಯದರ್ಶಿ ಡಾ. ಆರತಿ ರಾಜಪೂರ್, ಆಯುಷ್ ಇಲಾಖೆಯ ವೈದ್ಯಾಧಿಕಾರಿ ಡಾ. ಮುನಿವಾಸುದೇವ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿಗಳು ಇದ್ದರು.

ಲಿಂಗ ತಾರತಮ್ಯ ವಿರುದ್ಧ ಧ್ವನಿ ಎತ್ತಿದ ಆದ್ಯ ವಚನಕಾರ ನೇಕಾರ ಸಂತ ದೇವರ ದಾಸಿಮಯ್ಯ -ಮುಂಡರಗಿ ನಾಗರಾಜ



ಬಳ್ಳಾರಿ,ಮಾ.24-

ವಚನ ಸಾಹಿತ್ಯ ಕಾಲದಲ್ಲಿಯೇ ಲಿಂಗ ತಾರತಮ್ಯ ವಿರುದ್ಧ ಧ್ವನಿ ಎತ್ತಿದ ಆದ್ಯ ವಚನಕಾರ ನೇಕಾರ ಸಂತ ದೇವರ ದಾಸಿಮಯ್ಯನವರು ಎಂಬುದಾಗಿ ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಛಯದ ಹೊಂಗಿರಣ ಸಭಾಂಗಣದಲ್ಲಿ ಸೋಮವಾರ ಆಯೋಜಿದ್ದ ಆದ್ಯ ವಚನಕಾರ ನೇಕಾರ ಸಂತ ದೇವರ ದಾಸಿಮಯ್ಯ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

11 ನೇ ಶತಮಾನದಲ್ಲಿಯೇ ದೇವರ ದಾಸಿಮಯ್ಯರವರು ವಚನ ಸಾಹಿತ್ಯದ ಮೂಲಕ ಲಿಂಗ ತಾರತಮ್ಯ ಮಾಡುವುದು ತಪ್ಪು ಎಂದು ಪ್ರತಿಪಾದಿಸಿದ್ದರು. ಈ ಕುರಿತು ಶಿವನ ಆರಾಧನೆಯ ಮೂಲಕ ಜನರಿಕೆ ತಿಳಿವಳಿಕೆ ನೀಡುತ್ತಿದ್ದರು. ಹಾಗಾಗಿ ಪ್ರಸ್ತುತ ಸಮಾಜದಲ್ಲಿ ಮಹಿಳೆಯರಿಗೆ ವಿಶೇಷ ಸ್ಥಾನಮಾನ ಒದಗಿಸಿ ಸಮಾಜದಲ್ಲಿ ಉತ್ತಮ ಜೀವನ ನಡೆಸಲು ಎಲ್ಲರು ಸಹಕರಿಸಬೇಕು ಎಂದು ಅಭಿಪ್ರಾಯಪಟ್ಟರು.

ಮಹಾನಗರ ಪಾಲಿಕೆಯ ಮಹಾಪೌರರಾದ ಪಿ.ಗಾದೆಪ್ಪ ಮಾತನಾಡಿ, ವಚನಗಳಿಗೆ ಮನಃ ಪರಿವರ್ತನೆ ಮಾಡುವ ಶಕ್ತಿ ಹೊಂದಿವೆ. ಈ ನಿಟ್ಟನಲ್ಲಿ ದೇವರ ದಾಸಿಮ್ಯನವರ ವಚನಗಳ ಕುರಿತು ಎಲ್ಲರು ತಿಳಿದುಕೊಳ್ಳಬೇಕು ಎಂದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ದೇವರ ದಾಸಿಮ್ಯನವರ ಕನಸಿನಂತೆ ಸಮಾಜದಲ್ಲಿ ಯಾರು ಕೂಡ ಹಸಿವಿನಿಂದ ಬಳಲಬಾರದು ಎಂದು ರಾಜ್ಯ ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ಹೇಳಿದರು. ಬಳ್ಳಾರಿಯ ಅಮಾತಿ ಬಸವರಾಜ ಅವರು ಜಯಂತಿ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಮಾತನಾಡಿ, ವೃತ್ತಿಯಲ್ಲಿ ನೇಕಾರನಾದ ದಾಸಿಮಯ್ಯ ನವರು ಶಿವನಿಗೆ ಬಟ್ಟೆಯನ್ನು ಕೊಟ್ಟು ಅಪೂರ್ವಭಕ್ತಿ ಮೆರೆದವರು. ಕಾಯಕವನ್ನೇ ಕೈಲಾಸವಾಗಿಸಿಕೊಂಡ ಸಾಧಕರಾಗಿದ್ದರು ಎಂದು ಹೇಳಿದರು.

ಆದ್ಯ ವಚನಕಾರ ದೇವರ ದಾಸಿಮಯ್ಯನವರು ಶಿವನಿಗೆ ತಮ್ಮನ್ನು ತಾವು ಒಪ್ಪಿಸಿಕೊಂಡು ದಾಸರಾದರು. ಸಮಾಜದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಬಾಳಬೇಕು ಎಂದು ಸಾರಿದವರು ದಾಸಿಮಯ್ಯ ಎಂದು ತಿಳಿಸಿದರು.

ವೇದಿಕೆ ಕಾರ್ಯಕ್ರಮ ಆರಂಭಕ್ಕೂ ಮುನ್ನ ಕು.ತಸ್ಮಯ್ ಅನ್ನಪೂರ್ಣ ಮತ್ತು ತಂಡದಿಂದ ವಚನ ಸಂಗೀತ ಪ್ರಸ್ತುತಪಡಿಸಿದರು. ಬಳಿಕ ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ನೇಕಾರರ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ಸಿ.ದೇವಾನಂದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಸಮಾಜದ ಮುಖಂಡರು, ಸಾರ್ವಜನಿಕರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.



ಭಗತ್ ಸಿಂಗ್ ಹುತಾತ್ಮ ದಿನದ ಅಂಗವಾಗಿ ಪಂಜಿನ ಮೆರವಣಿಗೆ

ಕಲಬುರಗಿ,ಮಾ.24-

ಭಗತ್ ಸಿಂಗ್, ಸುಖದೇವ್ ಹಾಗೂ ರಾಜಗುರು ಅವರ 95ನೇ ಹುತಾತ್ಮ ದಿನಾಚರಣೆ ಅಂಗವಾಗಿ ಎಐಡಿವೈಓ ವತಿಯಿಂದ ಸೋಮವಾರ ನಗರದಲ್ಲಿ ಪಂಜಿನ ಮೆರವಣಿಗೆ ನಡೆಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದ ಎಐಡಿವೈಓ ರಾಜ್ಯ ಕಾರ್ಯದರ್ಶಿ ಸಿದ್ದಲಿಂಗ ಬಾಗೇವಾಡಿ, ಬಡತನ, ನಿರುದ್ಯೋಗ, ಅಸಮಾನತೆ, ಕೋಮು ಹಾಗೂ ಜಾತಿ ವೈಷಮ್ಯಗಳಿಲ್ಲದ ಭಾರತವೇ ಭಗತ್ ಸಿಂಗ್ ಅವರ ಕನಸಾಗಿತ್ತು ಎಂದು ಹೇಳಿದರು.

ಇಂದಿನ ಪರಿಸ್ಥಿತಿಯಲ್ಲಿ ಈ ಸಮಸ್ಯೆಗಳು ಹೆಚ್ಚಾಗುತ್ತಿರುವುದರಿಂದ ಅವುಗಳ ವಿರುದ್ಧ ಹೋರಾಡಲು ಭಗತ್ ಸಿಂಗ್ ಅವರ ವಿಚಾರಧಾರೆ ಅತ್ಯಂತ ಅಗತ್ಯವಾಗಿದೆ. ಯುವಕರು ಸಂಘಟಿತ ಹೋರಾಟಕ್ಕೆ ಮುಂದಾಗಬೇಕು ಎಂದು ಕರೆ ನೀಡಿದರು.

ಭಗತ್ ಸಿಂಗ್ ಅವರು ಕೇವಲ 23ನೇ ವಯಸ್ಸಿನಲ್ಲಿ ಅಪಾರ ಜ್ಞಾನ ಸಂಪಾದಿಸಿ ಬ್ರಿಟಿಷರ ವಿರುದ್ಧ ಹೋರಾಡಿದ ಕ್ರಾಂತಿಕಾರಿಯಾಗಿದ್ದು, ಯುವಕರು ಅವರಂತೆ ಅಧ್ಯಯನ ಮತ್ತು ಎದೆಗಾರಿಕೆ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಈ ವೇಳೆ ಸಂಘಟನೆಯ ಜಿಲ್ಲಾ ಅಧ್ಯಕ್ಷ ಜಗನ್ನಾಥ್ ಎಸ್.ಎಚ್ ಮಾತನಾಡಿ, 2004ರಲ್ಲಿ ಪದವೀಧರ ನಿರುದ್ಯೋಗ ಪ್ರಮಾಣ ಶೇ.32ರಷ್ಟು ಇತ್ತಾದರೆ, 2024ರಲ್ಲಿ ಅದು ಶೇ.67ಕ್ಕೆ ಏರಿಕೆಯಾಗಿದೆ ಎಂದು ಹೇಳಿದರು. ಕೇಂದ್ರ ಸರ್ಕಾರ ಯುವಜನರನ್ನು ಕಡೆಗಣಿಸಿದ್ದು, ಲಕ್ಷಾಂತರ ಪದವೀಧರರು ಉದ್ಯೋಗಕ್ಕಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸದಸ್ಯ ರಮೇಶ್ ದೇವಕರ್ ಪ್ರಸ್ತಾವಿಕವಾಗಿ ಮಾತನಾಡಿದರು. ಪಂಜಿನ ಮೆರವಣಿಗೆಯು ರೈಲು ನಿಲ್ದಾಣದಿಂದ ಪ್ರಾರಂಭವಾಗಿ ಎಸ್.ವಿ.ಪಿ ವೃತ್ತದಲ್ಲಿ ಸಮಾಪ್ತಿಯಾಯಿತು. ಕಾರ್ಯಕ್ರಮದಲ್ಲಿ ರಘು ಪವಾರ್ ಪುಟ್ಟರಾಜ್, ಲಿಂಗ ಶೆಟ್ಟಿ, ಪ್ರಶಾಂತ್ ಹೊಸಮನಿ, ದೇವರಾಜ್ ಮಿರಲ್ಕರ್ ಶೇಖರ್ ಸಿಂಗ್, ಉಮೇಶ್ ಯಾದವ್ ಸೇರಿದಂತೆ ಹಲವರು ಭಾಗವಹಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆ ಯನ್ನು ಜಿಲ್ಲಾ ಕಾರ್ಯದರ್ಶಿ ಈಶ್ವರ್ ಕೆ ವಹಿಸಿದ್ದರು.



ಅರಣ್ಯ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ : ಜಟ್ಟೆಪ್ಪ ನಾವಿ

ಚಿತ್ತಾಪುರ,ಮಾ.24-

ಗಿಡ-ಮರಗಳು ಪರಿಸರ ಸಮತೋಲನ, ಶುದ್ಧ ಗಾಳಿ ಹಾಗೂ ಜೀವಜಾಲದ ಉಳಿವಿಗೆ ಅತ್ಯಗತ್ಯವಾಗಿದ್ದು, ಅರಣ್ಯ ಸಂರಕ್ಷಣೆಗಾಗಿ ಪ್ರತಿಯೊಬ್ಬ ನಾಗರಿಕರೂ ಜಾಗೃತಿ ವಹಿಸಬೇಕು ಎಂದು ಉಪವಲಯ ಅರಣ್ಯ ಅಧಿಕಾರಿ ಜಟ್ಟೆಪ್ಪ ನಾವಿ ಹೇಳಿದರು.

ತಾಲೂಕಿನ ಮಾಡಬೂಳ ಸಮೀಪದ ಪ್ರಾದೇಶಿಕ ಅರಣ್ಯ ಸಸ್ಯಕ್ಷೇತ್ರದಲ್ಲಿ ಪ್ರಾದೇಶಿಕ ಅರಣ್ಯ ವಲಯ ಹಾಗೂ ಕಲಬುರಗಿಯ ಬಸವೇಶ್ವರ ಸಮಾಜ ಸೇವಾ ಬಳಗದ ಜಂಟಿ ಆಶ್ರಯದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಅರಣ್ಯ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಗಿಡ-ಮರಗಳನ್ನು ನೆಡುವುದು, ಅರಣ್ಯನಾಶ ತಡೆಯುವುದು, ಕಾಗದದ ಮಿತ ಬಳಕೆ ಹಾಗೂ ಪರಿಸರ ಜಾಗೃತಿ ಮೂಡಿಸುವ ಮೂಲಕ ಅರಣ್ಯ ಉಳಿಸುವಲ್ಲಿ ಪ್ರತಿಯೊಬ್ಬರೂ ತಮ್ಮ ಪಾತ್ರ ನಿರ್ವಹಿಸಬೇಕು ಎಂದು ಕರೆ ನೀಡಿದರು. ಉಪನ್ಯಾಸಕ ಎಚ್.ಬಿ. ಪಾಟೀಲ ಮಾತನಾಡಿ, ಅರಣ್ಯ ಸಂಪತ್ತನ್ನು ಉಳಿಸಿ ಮುಂದಿನ ಪೀಳಿಗೆಗೆ ಹಸಿರು ಭೂಮಿಯನ್ನು ಕೊಡುಗೆಯಾಗಿ ನೀಡಬೇಕಾಗಿದೆ. ದೇಶದ ಒಟ್ಟು ಅರಣ್ಯ ವಿಸ್ತೀರ್ಣ ಶೇ.21.76ರಷ್ಟಿದ್ದು, ಇದು ಕನಿಷ್ಠ ಶೇ.33ರಷ್ಟಾಗಬೇಕು. ಇದಕ್ಕಾಗಿ ಎಲ್ಲೆಡೆ ಗಿಡ-ಮರಗಳನ್ನು ನೆಟ್ಟು ಸಂರಕ್ಷಣೆ ಮಾಡಬೇಕು ಎಂದು ತಿಳಿಸಿದರು.

''ಹಸಿರೇ ಉಸಿರು'' ಎಂಬುದನ್ನು ಮರೆಯದೆ ಪರಿಸರ ಸಂರಕ್ಷಣೆಗಾಗಿ ಎಲ್ಲರೂ ಕೈಜೋಡಿಸಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಬಳಗದ ಸದಸ್ಯ ಮಹಾದೇವಪ್ಪ ಎಚ್.ಬಿರಾದಾರ, ಅರಣ್ಯ ವೀಕ್ಷಕರಾದ ರಾಮು ರಾಠೋಡ, ಶರಣಪ್ಪ ರಾಠೋಡ, ಮುಖಂಡರಾದ ಶರಣಮ್ಮ, ಅನಿತಾ, ರಾಮು ಪವಾರ, ವಿಶಾಲ, ನಿಕಿತಾ, ಸೋನು ಸೇರಿದಂತೆ ಇತರರು ಇದ್ದರು.

ಮರಿಬಸವಲಿಂಗ ದೇಶಿಕೇಂದ್ರ ಶಿವಯೋಗಿಗಳ 33ನೇ ಜಾತ್ರಾ ಮಹೋತ್ಸವ ಹಾಗೂ ಸಾಮೂಹಿಕ ವಿವಾಹ ಸಮಾರಂಭ



ಕವಿತಾಳ,ಮಾ.24-

ಸಮೀಪದ ಮಸ್ಕಿ ತಾಲೂಕಿನ ಬೆಂಚಮರಡಿ ಗ್ರಾಮದಲ್ಲಿ ಊಟಕನೂರು ಮರಿಬಸವಲಿಂಗ ದೇಶಿಕೇಂದ್ರ ಶಿವಯೋಗಿಗಳ 33ನೇ ಜಾತ್ರಾ ಮಹೋತ್ಸವ ಅಂಗವಾಗಿ ಸಾಮೂಹಿಕ ವಿವಾಹ ಸಮಾರಂಭ ನಡೆಯಿತು.

ಈ ಸಂದರ್ಭದಲ್ಲಿ ಮರೀಬಸವರಾಜ ದೇಶಿಕೇಂದ್ರ ಸ್ವಾಮೀಜಿ ಮಾತನಾಡಿ ಭಕ್ತಿಯಿಂದ ಭಕ್ತರು ಸಾಮೂಹಿಕ ವಿವಾಹ ಸೇರಿ ಇನ್ನಿತರ ಕಾರ್ಯಕ್ರಮಗಳು ಮಠ ಮಂದಿರಗಳಲ್ಲಿ ನಡೆಸಿಕೊಂಡುಬರುತ್ತಿರುವದರಿಂದ ಉತ್ತಮ ಮಳೆ ಬೆಳೆಯಾಗುತ್ತಿವೆ. ಸುತ್ತಮುತ್ತಲಿನ ಗ್ರಾಮಗಳ ಬಡ ಜನರ ಸಾಮೂಹಿಕ ವಿವಾಹದಿಂದ ದುಂದು ವೆಚ್ಚಕ್ಕೆ ಕಡಿವಾಣ ಹಾಕಿದಂತಾಗುತ್ತದೆ ಆರ್ಥಿಕ ಹೊರೆಯನ್ನು ಕಡಿವಾಣ ಹಾಕಲಾಗುತ್ತಿದೆ ಎಂದರು.

ಶ್ರೀಗಳ ರಜತ ಮೂರ್ತಿ ಪಲ್ಲಕ್ಕಿ ಉತ್ಸವ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಡೊಳ್ಳು ಬಾಜಾ ಭಜಂತ್ರಿಯೊಂದಿಗೆ ಸಡಗರ ಸಂಭ್ರಮದಿಂದ ಮೆರವಣಿಗೆ ನಡೆಯಿತು.

18 ಜೋಡಿ ನೂತನ ವಧು ವರರು ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಈ ಸಂದರ್ಭದಲ್ಲಿ ಬಸವರಾಜಪ್ಪ ಗೌಡ ಹರ್ವಾಪುರು, ಕರಿಯಪ್ಪ ತಾತ ಹಾಲಾಪುರು, ಅಖಂಡೇಶ್ವರ ಸ್ವಾಮೀಜಿ, ಎ ಎಸ್ ಐ ಹೇಮಂತ, ಮಹಿಳಾ ಮತ್ತು ಮಕ್ಕಳು ಕಲ್ಯಾಣ ಇಲಾಖೆ ಮೇಲ್ವಿಚಾರಕಿ ಮಹಾಂತಮ್ಮ, ಅಂಗನವಾಡಿ ಕಾರ್ಯಕರ್ತರು ಮತ್ತು ಮಠದ ಸದ್ಭಾಕ್ತಾದಿಗಳು ಉಪಸ್ಥಿತರಿದ್ದರು.ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ವಿದ್ಯಾರ್ಥಿಗಳಿಗೆ ಸ್ಕಾಲರ್ ಶಿಪ್ ಪ್ರಮಾಣ ಪತ್ರವನ್ನು ವಿತರಣೆ

ನಗರದ ಖಾಸಗಿ ಹೋಟೆಲ್ ನಲ್ಲಿ ಬಿ.ಎಸ್.ಎಸ್. ಮೈಕ್ರೋ ಕ್ರೆಡಿಟ್ ಸಂಸ್ಥೆಯ ವತಿಯಿಂದ ಬಡ ವಿದ್ಯಾರ್ಥಿಗಳಿಗೆ ಸ್ಕಾಲರ್ ಶಿಪ್ ಪ್ರಮಾಣ ಪತ್ರವನ್ನು ವಿತರಿಸುವ ಕಾರ್ಯಕ್ರಮವನ್ನು ಬಿ.ಎಸ್.ಎಸ್. ಮೈಕ್ರೋ ಕ್ರೇಡಿಟ್ ಸಂಸ್ಥೆಯ ಉಪಾಧ್ಯಕ್ಷರಾದ ಬಿ. ಶಂಕರರಾವರವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ಜಿಲ್ಲಾ ಹೆಚ್ಚುವರಿ ಪೋಲಿಸ ವಿಭಾಗ , ಅಧೀಕ್ಷಕರಾದ ಕುಮಾರ ಸ್ವಾಮಿಯವರು ದೀಪ ಬೆಳಗುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಇಂತ ಅಧುನಿಕ ಕಾಲದಲ್ಲಿ ಬಡ ಮಕ್ಕಳನ್ನು ಬಡ ಕುಟುಂಬಗಳನ್ನು ಗುರುತ್ತಿಸಿ ಅವರಿಗೆ ಉದ್ಯೋಗಾವಕಾಶಗಳನ್ನು ಹೊದಗಿಸಿ ಅವರಿಗೆ ಸ್ಕಾಲರಶಿಪ್ ಪ್ರಮಾಣ ಪತ್ರವನ್ನು ವಿತರಿಸುತ್ತಿರುವುದು ಶ್ಲಾಘನೀಯವಾಗಿದೆ, ನನ್ನ ಸುದೈವವೇನೋ ಗೊತ್ತಿಲ್ಲ ಇಷ್ಟೊಂದು ವಿದ್ಯಾರ್ಥಿಗಳು ಅವರ ಪಾಲಕರನ್ನು ಕಾಣುವ ಅವಕಾಶ ಸಿಕ್ಕಿದ್ದು ಸಂತೋಷವಾಗಿದೆ, ಇದೇ ರೀತಿಯಲ್ಲಿ ಬಿ.ಎಸ್.ಎಸ್. ಸಂಸ್ಥೆಯು ದೇಶವಲ್ಲದೇ ಜಗತ್ತಿನಾದ್ಯಂತ ತನ್ನ ಸೇವೆಯನ್ನು ಸಲ್ಲಿಸಿ ಬಡ ಜನರ ಬಾಳಿಗೆ ಬೆಳಕಾಗಲಿ, ಅದರಂತೆ ಪಾಲಕರು ಮತ್ತು ವಿದ್ಯಾರ್ಥಿಗಳು ಸಹಿತ ಈ ಸಂಸ್ಥೆಯ ಸೇವೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಹೇಳಿದರು.

ತಿಮರಯ ಸ್ವಾಮಿಯವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ನಂತರ ಸುಧೀಂದ್ರರವರು ಮಾತನಾಡಿ ಬಿ.ಎಸ್.ಎಸ್. ಸೊನಾಟಾ ಸಂಸ್ಥೆಯ ಸೌಲಭಗಳು ಬಡವರಿಗೆ ನೆರಳಾಗುವ ಯೋಜನೆಗಳು ಇರುತ್ತವೆ, ಬಡ ವಿದ್ಯಾರ್ಥಿಗಳಿಗೆ ತುಂಬಾ ಅನುಕೂಲಕರವಾದ ಸೇವೆಯನ್ನು ಈ ಸಂಸ್ಥೆ ಸಲ್ಲಿಸುತ್ತಿರುವುದು ತಂಬಾ ಶ್ಲಾಘನೀಯವಾದುದು ಈ ಸಂಸ್ಥೆಯು ಮುಂದಿನ ದಿನಗಳಲ್ಲಿ ತನ್ನದೇ ಆದ ಛಾಪನ್ನು ಈ ದೇಶಕ್ಕೆ ನಾಡಿಗೆ ಮೂಡಿಸಲಿ ಎಂದು ಅಭಿನಂದಿಸಿದರು.

ಮಹನೀಯರ ಸಾರ್ಥಕ ಜೀವನದ ಬಗ್ಗೆ ಜನರಿಗೆ ತಿಳಿಸುವಂತೆ ಅರ್ಥಪೂರ್ಣ ಜನ್ಮದಿನಾಚರಣೆಗೆ ಕ್ರಮ ವಹಿಸಿ: ಡಾ.ಸುರೇಶ ಬಿ.ಇಟ್ನಾಳ



ಕೊಪ್ಪಳ ಮಾ.24-

ಏಪ್ರಿಲ್ ನಲ್ಲಿ ಆಚರಿಸಲಾಗುವ ಡಾ.ಬಾಬು ಜಗಜೀವನ ರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಅವರ ಜನ್ಮದಿನಾಚರಣೆಯ ಅಂಗವಾಗಿ ಅವರ ಸಾರ್ಥಕ ಜೀವನದ ಬಗ್ಗೆ ಜನರಿಗೆ ತಿಳಿಯುವಂತೆ ಎಲ್‌ಇಡಿ ಸ್ಕೀನ್‌ಗಳ ಮೂಲಕ ಜೀವನ ಚರಿತ್ರೆ ಪರಿಚಯಿಸಿ, ಅರ್ಥಪೂರ್ಣವಾಗಿ ಜಯಂತಿ ಆಚರಣೆಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಹೇಳಿದರು.

ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಏಪ್ರಿಲ್ 5 ರಂದು ಆಚರಿಸಲಾಗುವ ಡಾ.ಬಾಬು ಜಗಜೀವನ್ ರಾಂ ಅವರ 119ನೇ ಜನ್ಮದಿನಾಚರಣೆ ಹಾಗೂ ಏಪ್ರಿಲ್ 14 ರಂದು ಆಚರಿಸಲಾಗುವ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ ಅಂಗವಾಗಿ ಚರ್ಚಿಸಲು ಕರೆಯಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಏ.5 ರಂದು ಜಿಲ್ಲಾ ಕೇಂದ್ರದಲ್ಲಿ ಡಾ.ಬಾಬು ಜಗಜೀವನ್ ರಾಂ ಅವರ 119ನೇ ಜನ್ಮದಿನಾಚರಣೆಯನ್ನು ಹಾಗೂ ಏಪ್ರಿಲ್ 14 ರಂದು ಆಚರಿಸಲಾಗುವ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಗುವುದು. ನಿಗದಿತ ದಿನಾಂಕಗಳಂದು ಬೆಳಿಗ್ಗೆ 8.30 ಗಂಟೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಮಹನೀಯರ ಭಾವಚಿತ್ರದ ಮೆರವಣಿಗೆ ಆರಂಭವಾಗಿ, ಗಡಿಯಾರ ಕಂಬ ಮಾರ್ಗವಾಗಿ ಜವಾಹರ ರಸ್ತೆ ಮೂಲಕ ಸಾಹಿತ್ಯ ಭವನದವರೆಗೆ ಮೆರವಣಿಗೆ ನಡೆಯಲಿದೆ. ಸಾಹಿತ್ಯ ಭವನದಲ್ಲಿ ಬೆಳಿಗ್ಗೆ 10.30 ಗಂಟೆಗೆ ವೇದಿಕೆ ಕಾರ್ಯಕ್ರಮಗಳು ನಡೆಯಲಿವೆ. ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಶಿಷ್ಠಾಚಾರದಂತೆ ವೇದಿಕೆ ಕಾರ್ಯಕ್ರಮ ಆಯೋಜನೆ ಮಾಡಬೇಕು. ಸಮುದಾಯದ ಸಾಧಕರಿಗೆ ಸನ್ಮಾನಿಸಬೇಕು. ಮಹನೀಯರ ಜೀವನ ಚರಿತ್ರೆಯ ಬಗ್ಗೆ ಇಂದಿನ ಯುವ ಪೀಳಿಗೆಗೆ ಅರಿವು ಮೂಡಿಸಲು ವಿಶೇಷ ಉಪನ್ಯಾಸ ಆಯೋಜಿಸಬೇಕು. ಮಹನೀಯರಿಗೆ ಸಂಬಂಧಿಸಿದ ಪುಸ್ತಕಗಳನ್ನು ವಿತರಿಸಬೇಕು ಎಂದು ಅವರು ಹೇಳಿದರು.


ನಿಗದಿತ ದಿನಾಂಕಗಳಂದು ಎಲ್ಲ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕು ಅಧಿಕಾರಿಗಳು ಕಡ್ಡಾಯವಾಗಿ ಕಾರ್ಯಕ್ರಮಕ್ಕೆ ಹಾಜರಾಗಬೇಕು. ಎಲ್ಲ ಸರ್ಕಾರಿ ಕಚೇರಿಗಳಲ್ಲಿ, ಗ್ರಾಮ ಪಂಚಾಯತಿಗಳಲ್ಲಿ ಕಡ್ಡಾಯವಾಗಿ ಮಹನೀಯರ ಜಯಂತಿಗಳನ್ನು ಆಚರಿಸಬೇಕು. ಮೆರವಣಿಗೆಯಲ್ಲಿ ಕಲಾತಂಡಗಳು ಭಾಗವಹಿಸಬೇಕು. ಮೆರವಣಿಗೆಯಲ್ಲಿ ಮಹನೀಯರ ಜೀವನದ ಸಾರ ಬಿಂಬಿಸುವ ಮಾಹಿತಿಯನ್ನು ಪ್ರಚುರ ಪಡಿಸಬೇಕು. ಜಿಲ್ಲಾ ಕೇಂದ್ರದಲ್ಲಿ ಕಾರ್ಯಕ್ರಮಗಳ ದಿನದಂದು ಮೆರವಣಿಗೆ ನಡೆಯುವ ರಸ್ತೆ, ಪ್ರಮುಖ ವೃತ್ತಗಳು, ವೇದಿಕೆ ಕಾರ್ಯಕ್ರಮದ ಸಭಾಂಗಣದ ಸ್ವಚ್ಛತೆ ಮಾಡಿಸಬೇಕು. ಕುಡಿಯುವ ನೀರಿನ ವ್ಯವಸ್ಥೆ ಮಾಡಿಸಬೇಕು. ಉಪಹಾರದ ವ್ಯವಸ್ಥೆ ಕಲ್ಪಿಸಬೇಕು. ಪೊಲೀಸ್ ಇಲಾಖೆಯಿಂದ ಸೂಕ್ತ ಭದ್ರತೆ ಒದಗಿಸಬೇಕು. ಯಾವುದೇ ಗೊಂದಲ, ಅಡಚಣೆ ಉಂಟಾಗದಂತೆ ಅಚ್ಚುಕಟ್ಟಾಗಿ ಕಾರ್ಯಕ್ರಮ ಆಯೋಜಿಸಬೇಕು ಎಂದು ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಕೃಷ್ಣಮೂರ್ತಿ ಟಿ., ಸಹಾಯಕ ಆಯುಕ್ತರಾದ ಕ್ಯಾ.ಮಹೇಶ ಮಾಲಗಿತ್ತಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ನಾಗವೇಣಿ, ನಗರಸಭೆ ಪೌರಾಯುಕ್ತ ವೆಂಕಟೇಶ, ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ಅಧಿಕಾರಿ ಪುಷ್ಪಲತಾ, ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಮಾಜದ ಮುಖಂಡರಾದ ವೆಂಕಟೇಶ ಹಾಲವರ್ತಿ, ಪಾಳೆಪ್ಪ ಎಚ್.ಪೂಜಾರ, ಸಿದ್ದರಾಮ ಹೊಸಮನಿ, ಶಾಂತಕುಮಾರ, ರಾಘು ಡಿ.ಚಾಕರಿ, ಚಂದ್ರುಸ್ವಾಮಿ ಹೊಸಮನಿ, ದ್ಯಾಮಣ್ಣ ಪೂಜಾರ, ರಾಮಣ್ಣ ಚೌಡ್ಕಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಅಧಿಕಾರ ರಾಜಕಾರಣದಲ್ಲಿ ಮುಸ್ಲಿಮರು ಎಲ್ಲಿದ್ದಾರೆ?



ಪ್ರಜಾಪ್ರಭುತ್ವದಲ್ಲಿ ನೈಜ ನಾಯಕತ್ವವು ಪ್ರತ್ಯಕ್ಷ ಚುನಾವಣೆಯ ಮೂಲಕವೇ ಬರಬೇಕಿದೆ. ಮತದಾನದ ಮೂಲಕವೇ ಕಾಂಗ್ರೆಸ್ ಪಕ್ಷ ಮತ್ತು ಶಾಮನೂರು ಕುಟುಂಬ ರಾಜಕಾರಣಕ್ಕೆ ಉತ್ತರ ಕೊಡಬೇಕಿದೆ. ದಾವಣಗೆರೆಯ ಹಿಂದೂ-ಮುಸ್ಲಿಮರೆಲ್ಲರೂ ಒಂದಾಗಿ, ಸೈದ್ಧಾಂತಿಕವಾಗಿ ಬದ್ಧತೆಯುಳ್ಳ ಸಮರ್ಥ ಅಭ್ಯರ್ಥಿಯನ್ನು ಗೆಲ್ಲಿಸಬೇಕಿದೆ. ಹೊಸ ಚರಿತ್ರೆ ಬರೆಯಬೇಕಾಗಿದೆ.

ನಿರೀಕ್ಷೆಯಂತೆಯೇ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಕ್ಕೆ ಆಡಳಿತಾರೂಢ ಕಾಂಗ್ರೆಸ್ ಪಕ್ಷ ಸಾಹುಕಾರ್ ಶಾಮನೂರು ಶಿವಶಂಕರಪ್ಪನವರ ಮೊಮ್ಮಗ ಸಮರ್ಥ ಶಾಮನೂರು ಅವರಿಗೆ ಟಿಕೆಟ್ ನೀಡಿದೆ. ಟಿಕೆಟ್ ಕೊಟ್ಟಿದ್ದನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಭಂಡತನದಿಂದ ಸಮರ್ಥಿಸಿಕೊಳ್ಳುತ್ತಿದ್ದಾರೆ. ಅಷ್ಟೇ ಅಲ್ಲ, ಟಿಕೆಟ್‌ಗಾಗಿ ಮುಸ್ಲಿಂ ಮತ್ತು ಹಿಂದುಳಿದ ಸಮುದಾಯಗಳ ದಶಕಗಳ ದುಂಬಾಲನ್ನು ದಮನ ಮಾಡಿದ್ದಾರೆ. ಆ ಮೂಲಕ ಶೋಷಿತ ಸಮುದಾಯಗಳ ರಾಜಕೀಯ ಅವಕಾಶವನ್ನು ಹೊಸಕಿಹಾಕಿದ್ದಾರೆ.

ಕಾಂಗ್ರೆಸ್ ಪಕ್ಷ ಮತ್ತು ಸಾಹುಕಾರ್ ಶಾಮನೂರು ಶಿವಶಂಕರಪ್ಪನವರು ಅಲ್ಪಸಂಖ್ಯಾತರಾದ ಮುಸಲ್ಮಾನರನ್ನು ರಾಜಕಾರಣದಿಂದ ದೂರವಿಡುತ್ತಿರುವುದು ಮತ್ತು ಬಳಸಿ ಬಿಸಾಡುತ್ತಿರುವುದು ಹೊಸದೇನೂ ಅಲ್ಲ. 2008ರ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ, ಕ್ಷೇತ್ರದಲ್ಲಿ ಮುಸಲ್ಮಾನರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆಂದು ಸೈಯದ್ ಸೈಫುಲ್ಲಾ ಎಂಬುವವರಿಗೆ ಕಾಂಗ್ರೆಸ್ ಟಿಕೆಟ್ ನೀಡಿತ್ತು. ಆದರೆ, ಸಾಹುಕಾರ್ ಶಿವಶಂಕರಪ್ಪನವರು ಆತನಿಂದ ಬಿ ಫಾರಂ ಕಿತ್ತುಕೊಂಡು ಹರಿದುಹಾಕಿದ್ದರು. ಆದರೆ ಅದು ಸುದ್ದಿಯಾಗಲಿಲ್ಲ. ಬದಲಿಗೆ ನಾನು ಚುನಾವಣೆಗೆ ನಿಲ್ಲುವುದಿಲ್ಲ, ಸಾಹುಕಾರ್ ಶಿವಶಂಕರಪ್ಪನವರೇ ಅಭ್ಯರ್ಥಿ, ಅವರ ಪರವಾಗಿ ಮತಯಾಚಿಸುತ್ತೇನೆ ಎಂಬ ಸೈಫುಲ್ಲಾರ ಹೇಳಿಕೆ ಸುದ್ದಿಯಾಗಿತ್ತು. ಧಣಿಗಳ ದುಡ್ಡು ಮತ್ತು ದರ್ಪ ಮಾತನಾಡಿತ್ತು; ಅಲ್ಪಸಂಖ್ಯಾತರಿಗಾದ ಅವಮಾನವನ್ನು ಸಹಿಸಿಕೊಂಡು ಸುಮ್ಮನಾಗಬೇಕಾಯಿತು.

ಶಾಮನೂರರು ಕಾಂಗ್ರೆಸ್ ಪಕ್ಷಕ್ಕೆ ಎಷ್ಟು ನಿಷ್ಠರಾಗಿದ್ದರು ಎಂದರೆ, ಆರು ದಶಕಗಳ ರಾಜಕಾರಣದಲ್ಲಿ ಅವರು ಬೇರೆ ಪಕ್ಷಗಳತ್ತ ನೋಡಿದ್ದಿಲ್ಲ. ಆದರೆ, ಆ ನಿಷ್ಠೆಯ ಮರೆಯಲ್ಲಿ ಮಾಡಿದ ಅಧ್ವಾನಗಳು, ಅನಾಹುತಗಳು, ಅವಘಡಗಳು ಒಂದೆರಡಲ್ಲ. ಅಷ್ಟೆಲ್ಲ ಮಾಡಿಯೂ ದಕ್ಕಿಸಿಕೊಂಡಿದ್ದರು, ಧಣಿ ಎನಿಸಿಕೊಂಡಿದ್ದರು. ಈಗ ಅವರ ಮೊಮ್ಮಗ ಸಮರ್ಥ, ಆ ಪರಂಪರೆಯನ್ನು ಮುಂದುವರೆಸಿದ್ದಾರೆ. ಕಾಂಗ್ರೆಸ್ ಪಕ್ಷ ಅಧಿಕೃತವಾಗಿ ಅಭ್ಯರ್ಥಿ ಎಂದು ಘೋಷಿಸದೇ ಇದ್ದರೂ, ಬಿ ಫಾರಂ ಕೊಡದೇ ಇದ್ದರೂ, ನಾನೇ ಅಭ್ಯರ್ಥಿ ಎಂದು ನಾಮಪತ್ರ ಸಲ್ಲಿಸಿದ್ದಾರೆ. ಆತನ ಕೃತ್ಯಕ್ಕೆ ಕುಮ್ಮಕ್ಕು ನೀಡುವಂತೆ, ಕಾಂಗ್ರೆಸ್ ಪಕ್ಷ ಆತನಿಗೇ ಅಧಿಕೃತ ಬಿ ಫಾರಂ ಕೊಟ್ಟಿದೆ. ದಾವಣಗೆರೆ ಧಣಿಗಳ ಶ್ರೀಮಂತಿಕೆಗೆ, ದರ್ಪಕ್ಕೆ, ದುರಹಂಕಾರಕ್ಕೆ ಕಾಂಗ್ರೆಸ್ ಪಕ್ಷ ಅಂದೂ ಮಣಿದಿತ್ತು. ಇಂದೂ ಕೂಡ ಮಣಿದಿದೆ. ಕುಟುಂಬ ರಾಜಕಾರಣಕ್ಕೆ ಜೈ ಎಂದಿದೆ, ಪ್ರಜಾಪ್ರಭುತ್ವಕ್ಕೆ ಮಸಿ ಬಳಿದಿದೆ.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಒಟ್ಟು ಜನಸಂಖ್ಯೆ 2.5 ಲಕ್ಷ ಎಂದು ಅಂದಾಜಿಸಲಾಗಿದೆ. ಅದರಲ್ಲಿ ಬಹುಸಂಖ್ಯಾತರು ಮುಸ್ಲಿಮರು. ಅಂದರೆ, ಒಟ್ಟು ಜನಸಂಖ್ಯೆಯಲ್ಲಿ ಶೇ. 35ರಿಂದ 40ರಷ್ಟು ಮುಸ್ಲಿಂ ಮತದಾರರಿದ್ದಾರೆ. ಶೇ. 30ರಷ್ಟು ಹಿಂದುಳಿದವರಿದ್ದಾರೆ. ಕೇವಲ ಶೇ. 25ರಷ್ಟು ಲಿಂಗಾಯತರು ಇರುವ ಈ ಕ್ಷೇತ್ರದಲ್ಲಿ ಸಾಹುಕಾರ್ ಶಿವಶಂಕರಪ್ಪನವರು, ಮುಸ್ಲಿಮರು ಮತ್ತು ಹಿಂದುಳಿದವರ ಬೆಂಬಲದಿಂದ ಆರು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಸಚಿವರಾಗಿ ಮೆರೆದಿದ್ದಾರೆ. ಸಮೃದ್ಧವಾಗಿ ಬೆಳೆದಿದ್ದಾರೆ. ಕಳೆದ ಚುನಾವಣೆಯಲ್ಲಿ, ಇದು ನನ್ನ ಕೊನೆಯ ಚುನಾವಣೆ, ಮುಂದಿನಬಾರಿ ನಿಮಗೇ ಟಿಕೆಟ್ ಎಂಬ ಆಶ್ವಾಸನೆಯನ್ನೂ ಕೊಟ್ಟಿದ್ದರು. ಮುಸ್ಲಿಮರೂ ಸಿದ್ಧರಾಗಿದ್ದರು. ಈಗ ಅದು ಮೊಮ್ಮಗನಿಂದ ಮಣ್ಣು ಪಾಲಾಗಿದೆ.

ಮುಸಲ್ಮಾನರು ಗೆಲ್ಲುವ ಕ್ಷೇತ್ರಗಳಿಗೂ ಕಾಂಗ್ರೆಸ್ ಪಕ್ಷ ಟಿಕೆಟ್ ನೀಡದಿದ್ದರೆ; ಮುಸ್ಲಿಮರೆಂದರೆ ಭಯೋತ್ಪಾದಕರು, ಪಾಕಿಸ್ತಾನದವರು ಎಂದು ಬಹಿರಂಗವಾಗಿಯೇ ಹೀಯಾಳಿಸುವ ಬಿಜೆಪಿ-ಜೆಡಿಎಸ್ ಪಕ್ಷಗಳು ನೀಡುವುದುಂಟೇ? ಕಾಂಗ್ರೆಸ್ ಪಕ್ಷದ ಜಾತ್ಯತೀತತೆ, ಸಮಾನತೆ, ಸಾಮಾಜಿಕ ನ್ಯಾಯ ಬರಿ ಭಾಷಣಕ್ಕಷ್ಟೇ ಸೀಮಿತವಾಯಿತೇ?

ರಾಜ್ಯದಲ್ಲಿ ಸುಮಾರು ಒಂದು ಕೋಟಿಯಷ್ಟಿರುವ ಮುಸ್ಲಿಂ ಸಮುದಾಯವನ್ನು ಕಾಂಗ್ರೆಸ್ ಪಕ್ಷ, ತನ್ನ ಮತಬ್ಯಾಂಕ್‌ನಂತೆ ಬಳಸಿಕೊಂಡು ಬಿಸಾಡುತ್ತಲೇ ಬಂದಿದೆ. ಜನಸಂಖ್ಯೆಗೆ ತಕ್ಕಂತೆ ರಾಜಕೀಯ ಪ್ರಾತಿನಿಧ್ಯ ನೀಡದೆ ವಂಚಿಸುತ್ತಲೂ ಇದೆ. 2013ರ ವಿಧಾನಸಭಾ ಚುನಾವಣೆಯಲ್ಲಿ 19 ಮುಸ್ಲಿಮರಿಗೆ ಅವಕಾಶ ನೀಡಿತ್ತು; 2018ರಲ್ಲಿ 17ಕ್ಕೆ ಇಳಿಯಿತು; 2023ರಲ್ಲಿ 15ಕ್ಕೆ ಕುಸಿಯಿತು. ವಿಧಾನ ಸಭೆಯ ಸದಸ್ಯರ ಸಂಖ್ಯೆ ಕಳೆದ ಎರಡು ದಶಕಗಳಲ್ಲಿ 22 ಸದಸ್ಯರಿಂದ 7ಕ್ಕೆ ಬಂದು ನಿಂತಿದೆ. ಅಂದರೆ, ಚುನಾವಣೆಯಿಂದ ಚುನಾವಣೆಗೆ ಕಾಂಗ್ರೆಸ್ ಪಕ್ಷ ಮುಸ್ಲಿಮರಿಗೆ ನೀಡುವ ರಾಜಕೀಯ ಪ್ರಾತಿನಿಧ್ಯ ಸಂಕುಚಿತಗೊಳ್ಳುತ್ತ ಸಾಗಿದೆ. ಇದು ಮುಸ್ಲಿಮರು ರಾಜಕೀಯದಿಂದ ದೂರವಾಗುತ್ತಿದ್ದಾರೆ ಎನ್ನುವ ಮುನ್ಸೂಚನೆಯೇ ಅಥವಾ ಮುಸ್ಲಿಮರನ್ನು ರಾಜಕೀಯದಿಂದ ದೂರ ಸರಿಸಲಾಗುತ್ತಿದೆಯೇ?

ಇಂದು ಬಹುತೇಕ ಕಡೆ ಮುಸ್ಲಿಮರು ಗೆಲ್ಲುವ ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷ ಮುಸ್ಲಿಮರಿಗೆ ಟಿಕೆಟ್ ನೀಡುತ್ತಿಲ್ಲ, ಬೇರೆ ಪಕ್ಷದವರು ಟಿಕೆಟ್ ನೀಡಿದರೆ ಸಹಿಸಿಕೊಳ್ಳುತ್ತಿಲ್ಲ. ಅಕಸ್ಮಾತ್ ಕಾಂಗ್ರೆಸ್ ಪಕ್ಷದಿಂದ ಮುಸ್ಲಿಂ ಸಮುದಾಯದ ಅಭ್ಯರ್ಥಿ ಚುನಾವಣೆಗೆ ಸ್ಪರ್ಧಿಸಿದರೆ, ಆತ ಕಾಂಗ್ರೆಸ್ ಅಭ್ಯರ್ಥಿಯಾಗಿರುವುದಿಲ್ಲ, ಮುಸ್ಲಿಂ ಅಭ್ಯರ್ಥಿಯಾಗಿರುತ್ತಾರೆ. ತಮ್ಮ ಜವಾಬ್ದಾರಿಯನ್ನು ತಾವೆ ಹೊತ್ತುಕೊಂಡಿರುತ್ತಾರೆ. ಆದರೆ, ಅದೇ ಕಾಂಗ್ರೆಸ್ ಪಕ್ಷದಿಂದ ಬೇರೆ ಸಮುದಾಯದ ಅಭ್ಯರ್ಥಿ ಚುನಾವಣೆಗೆ ಸ್ಪರ್ಧೆ ಮಾಡಿದಲ್ಲಿ ಅವನು ಕಾಂಗ್ರೆಸ್ ಅಭ್ಯರ್ಥಿ ಆಗುತ್ತಾನೆ. ಬಹುತೇಕ ಕಡೆ ಕಾಂಗ್ರೆಸ್ ಪಕ್ಷದ ಮುಸ್ಲಿಂ ಅಭ್ಯರ್ಥಿ ಚುನಾವಣೆಯಲ್ಲಿ ಸೋಲುತ್ತಿರುವುದಕ್ಕೆ ಇದು ಮುಖ್ಯ ಕಾರಣವಾಗಿದೆ. ಇದನ್ನೂ ಮೀರಿ ಗೆದ್ದವರು, ನಾಲಾಯಕ್ ನಾಯಕರಾಗಿರುತ್ತಾರೆ. ಸಮುದಾಯವನ್ನೇ ಸುಲಿದು ಸಮೃದ್ಧರಾಗಿರುತ್ತಾರೆ.

ಈಗ ದಾವಣಗೆರೆಯಲ್ಲಿ ಆಗಿರುವುದೂ ಇದೇ. ಸಿದ್ದರಾಮಯ್ಯನವರ ಸಚಿವ ಸಂಪುಟದಲ್ಲಿ ಇಬ್ಬರು ಮುಸ್ಲಿಂ ಸಮುದಾಯಕ್ಕೆ ಸೇರಿದ ಸಚಿವರಿದ್ದಾರೆ. ಹಲವರು ಮುಂಚೂಣಿ ಮುಖಂಡರಿದ್ದಾರೆ. ಆದರೆ, ಅವರಾರಿಗೂ ಅಜೀಜ್ ಸೇಠ್, ಜಾಫರ್ ಶರೀಫ್, ನಜೀರ್ ಸಾಬ್‌ಗಳಿಗಿದ್ದ ನಾಯಕತ್ವದ ಗುಣವಾಗಲಿ, ದಕ್ಷತೆ-ಪ್ರಾಮಾಣಿಕತೆಯಾಗಲಿ, ಪ್ರಶ್ನಿಸುವ ಛಾತಿಯಾಗಲಿ ಇಲ್ಲ. ಈ ಕೊರತೆಯೇ ಮುಸ್ಲಿಂ ಸಮುದಾಯದ ಹಿನ್ನಡೆಗೆ ಮುಖ್ಯ ಕಾರಣವಾಗಿದೆ.

ಈಗಲೂ ಕಾಲ ಮಿಂಚಿಲ್ಲ. ಶ್ಯಾಮನೂರು ಧಣಿಯ ಮೊಮ್ಮಗ ಎನ್ನುವುದು ಬಿಟ್ಟರೆ ಈ ಬಾಲಕನಲ್ಲಿ ಶಾಸಕನಾಗುವ ಯಾವ ಅರ್ಹತೆಯೂ ಇಲ್ಲ. ದಾವಣಗೆರೆ ದಕ್ಷಿಣ ಕ್ಷೇತ್ರ ಸೋತರೆ ಕಾಂಗ್ರೆಸ್ ಸರ್ಕಾರವೇನೂ ಬಿದ್ದುಹೋಗುವುದಿಲ್ಲ. ಆದ್ದರಿಂದ ನಾಡಿನ ಅಲ್ಪಸಂಖ್ಯಾತ ಸಮುದಾಯ ಈಗ ಎಚ್ಚೆತ್ತುಕೊಳ್ಳುವ ಅಗತ್ಯವಿದೆ. ಬಳಸಿ ಬಿಸಾಡುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ಬುದ್ಧಿ ಕಲಿಸಬೇಕಿದೆ. ಅದಕ್ಕಾಗಿ ಮುಸ್ಲಿಮರು ಬಿಜೆಪಿಗೆ ಸೇರುವುದಲ್ಲ ಅಥವಾ ಬಿಜೆಪಿಗೆ ಮತ ಹಾಕುವುದೂ ಅಲ್ಲ. ಪ್ರಜಾಪ್ರಭುತ್ವದಲ್ಲಿ ನೈಜ ನಾಯಕತ್ವವು ಪ್ರತ್ಯಕ್ಷ ಚುನಾವಣೆಯ ಮೂಲಕವೇ ಬರಬೇಕಿದೆ. ಮತದಾನದ ಮೂಲಕವೇ ಕಾಂಗ್ರೆಸ್ ಪಕ್ಷ ಮತ್ತು ಶಾಮನೂರು ಕುಟುಂಬ ರಾಜಕಾರಣಕ್ಕೆ ಉತ್ತರ ಕೊಡಬೇಕಿದೆ. ದಾವಣಗೆರೆಯ ಹಿಂದೂ-ಮುಸ್ಲಿಮರೆಲ್ಲರೂ ಒಂದಾಗಿ, ಸೈದ್ಧಾಂತಿಕವಾಗಿ ಬದ್ಧತೆಯುಳ್ಳ ಸಮರ್ಥ ಅಭ್ಯರ್ಥಿಯನ್ನು ಗೆಲ್ಲಿಸಬೇಕಿದೆ. ಹೊಸ ಚರಿತ್ರೆ ಬರೆಯಬೇಕಾಗಿದೆ.

ದಾವಣಗೆರೆ ಸಮರ್ಥ್ ನಾಮಪತ್ರ ಸಲ್ಲಿಕೆ; ದೂರ ಉಳಿದ ರಾಜ್ಯ ಮುಸ್ಲಿಂ ಮುಖಂಡರು



ಡಿ.ಕೆ ಶಿವಕುಮಾರ್ ಮತ್ತು ಸಿದ್ದರಾಮಯ್ಯ ಅವರು ದಾವಣಗೆರೆ ಮುಸ್ಲಿಂ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಗಳನ್ನು ತ್ವರಿತವಾಗಿ ಸಮಾಧಾನಪಡಿಸದಿದ್ದರೆ, ಉಪಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಗೆಲುವು ಸುಲಭವಾಗದು. ಇದು ಕೇವಲ ದಾವಣಗೆರೆಯ ಕಥೆಯಲ್ಲ; ಕರ್ನಾಟಕದಲ್ಲಿ ಕಾಂಗ್ರೆಸ್-ಮುಸ್ಲಿಂ ಸಂಬಂಧದ ಮುಂದಿನ ಅಧ್ಯಾಯವನ್ನು ಬರೆಯುತ್ತಿದೆ.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಅವರ ನಾಮಪತ್ರ ಸಲ್ಲಿಕೆಯ ಸಂದರ್ಭವೇ ರಾಜಕೀಯ ವಲಯದಲ್ಲಿ ದೊಡ್ಡ ಚರ್ಚೆಗೆ ಗ್ರಾಸವಾಗಿದೆ. ಮಾರ್ಚ್ 23ರಂದು ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಅವರ ಉಪಸ್ಥಿತಿಯಲ್ಲಿ ಅಧಿಕೃತ -ಫಾರಂನೊಂದಿಗೆ ನಾಮಪತ್ರ ಸಲ್ಲಿಕೆಯಾಗಿದ್ದು, ಸಿಎಂ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ವಸತಿ ಸಚಿವ ಬಿ ಝಡ್ ಜಮೀರ್ ಅಹ್ಮದ್ ಖಾನ್, ರಹೀಂ ಖಾನ್, ಸಲೀ ಅಹಮ್ಮದ್, ತನ್ವೀರ್ ಸೇಠ್, ಹ್ಯಾರಿಸ್, ರಿಜ್ವಾನ್ ಅರ್ಷದ್ ಸೇರಿದಂತೆ ಕಾಂಗ್ರೆಸ್ಸಿನ ಮುಸ್ಲಿಂ ಮುಖಂಡರು ದೂರ ಉಳಿದಿದ್ದಾರೆ.

ಇದು ಕೇವಲ ಒಂದು ಸಂಕೇತವಲ್ಲ; ಕಾಂಗ್ರೆಸ್ ಪಕ್ಷದಲ್ಲಿ ಉದ್ಭವಿಸಿರುವ ಆಂತರಿಕ ಬಿರುಕು, ಅಲ್ಪಸಂಖ್ಯಾತರ ಅಸಮಾಧಾನ ಮತ್ತು ಕುಟುಂಬ ರಾಜಕಾರಣದ ಪ್ರಭಾವವನ್ನು ಬಯಲು ಮಾಡುತ್ತಿದೆ. ಈ ಘಟನೆಯನ್ನು ಕೇಂದ್ರೀಕರಿಸಿ ವಿಶ್ಲೇಷಿಸುವುದಾದರೆ, ಇದು ಉಪಚುನಾವಣೆಯ ಫಲಿತಾಂಶವನ್ನು ಮಾತ್ರವಲ್ಲ, ರಾಜ್ಯ ರಾಜಕೀಯದ ಭವಿಷ್ಯವನ್ನೇ ಬದಲಿಸುವ ಕತೆ ಹೇಳುತ್ತಿದೆ.

ಸ್ಥಳೀಯ ಮುಸ್ಲಿಂ ನಾಯಕ ಸಾದಿಕ್ ಪೈಲ್ವಾನ್ ಸ್ವತಂತ್ರ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದಾರೆ. 20ಕ್ಕೂ ಅಧಿಕ ಮಂದಿ ಮುಸ್ಲಿಂ ನಾಯಕರು ಬಿಜೆಪಿಗೆ ಬೆಂಬಲಿಸುವುದಾಗಿ ಘೋಷಿಸಿದ್ದಾರೆ. ಅಲ್ಲದೆ ಮುಸ್ಲಿಂ ಮಹಿಳೆ ಜಬೀನಾ ಸೇರಿದಂತೆ ಸುಮಾರು ಐದಾರು ಮಂದಿ ಪಕ್ಷೇತರವಾಗಿ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಇದು ಕೇವಲ ವೈಯಕ್ತಿಕ ಅಸಮಾಧಾನವಲ್ಲ; ಮುಸ್ಲಿಂ ಸಮುದಾಯಕ್ಕೆ ಕಾಂಗ್ರೆಸ್ ನಮ್ಮನ್ನು ಕಡೆಗಣಿಸಿದೆ ಎಂಬ ಸಂದೇಶವನ್ನು ನೀಡುತ್ತಿದೆ.

ರಾಜಕೀಯ ಲೆಕ್ಕಾಚಾರವೇನು?

ಕಾಂಗ್ರೆಸ್‌ನಲ್ಲಿ ಸಿದ್ದರಾಮಯ್ಯ ಅವರು ಮುಸ್ಲಿಂ ಅಭ್ಯರ್ಥಿಯನ್ನು ಬೆಂಬಲಿಸಿದ್ದರೆಂಬ ವದಂತಿಗಳಿದ್ದರೆ, ಡಿ.ಕೆ. ಶಿವಕುಮಾರ್ ಮತ್ತು ಮಲ್ಲಿಕಾರ್ಜುನ್ ಕುಟುಂಬವು ಲಿಂಗಾಯತರ ಬೆಂಬಲವನ್ನು ಉಳಿಸಿಕೊಳ್ಳಲು ಒತ್ತಾಯಿಸಿದರು ಎನ್ನಲಾಗುತ್ತಿದೆ. ಎಐಸಿಸಿ ಸುರ್ಜೇವಾಲಾ ಅವರ ಸಭೆಯಲ್ಲಿ ಜಮೀರ್ ಖಾನ್ ತಂಡವು ಟಿಕೆಟ್‌ಗಾಗಿ ಒತ್ತಾಯಿಸಿದರೂ, ಹೈಕಮಾಂಡ್ ಕುಟುಂಬ ಆಶಯ ಮತ್ತು ಸಮೀಕ್ಷೆಯನ್ನು ಆಧರಿಸಿ ಸಮರ್ಥ್‌ಗೆ ಟಿಕೆಟ್ ನೀಡಿತು. ಬದಲಾಗಿ ಮುಸ್ಲಿಂ ನಾಯಕರಿಗೆ , ಬೋರ್ಡ್‌ಗಳು, ಕ್ಯಾಬಿನೆಟ್‌ನಲ್ಲಿ ಹೆಚ್ಚು ಸ್ಥಾನಗಳನ್ನು ನೀಡುವುದಾಗಿ ಪ್ಲಾಸಿಬೋ(ಡಮ್ಮಿ ಚಿಕಿತ್ಸೆ) ಭರವಸೆ ನೀಡಲಾಗಿದೆ ಎಂದು ಮೂಲಗಳು ಹೇಳುತ್ತವೆ. ಆದರೆ ಇದು ಮುಸ್ಲಿಂ ಸಮುದಾಯಕ್ಕೆ ಸ್ವೀಕಾರಾರ್ಹವಾಗಿಲ್ಲ.

ದಾವಣಗೆರೆಯಲ್ಲಿ ಮುಸ್ಲಿಂ ಮತಗಳು ನಿರ್ಣಾಯಕವಾಗಿದ್ದು, ಶಾಮನೂರು ಕುಟುಂಬಕ್ಕೆ ಮೂರನೇ ತಲೆಮಾರಿಗೂ ಆದ್ಯತೆ ನೀಡಿರುವುದನ್ನು ಒಪ್ಪಿಕೊಳ್ಳುವುದು ಕಷ್ಟ ಎಂಬುದನ್ನು ಸಾದಿಕ್ ಪೈಲ್ವಾನ್ ಅವರ ಸ್ವತಂತ್ರ ಕಣಕ್ಕಿಳಿಯುವಿಕೆ ಮತ್ತು ಅಖ್ತಾರ್ ರಜಾ ಸರ್ಕಲ್‌ನಲ್ಲಿ ನಡೆದ ಪ್ರತಿಭಟನೆಗಳು ಸಾಬೀತುಪಡಿಸುತ್ತವೆ. ಬಿಜೆಪಿ ಇದನ್ನು ಬಳಸಿಕೊಂಡು ಕಾಂಗ್ರೆಸ್ ಮುಸ್ಲಿಮರನ್ನು ವಂಚಿಸಿದೆ ಎಂದು ಪ್ರಚಾರ ಮಾಡುತ್ತಿದೆ.

ಉಪಚುನಾವಣೆಯ ಪರಿಣಾಮಗಳು

ರಾಜ್ಯ ಮುಸ್ಲಿಂ ನಾಯಕರು ದೂರ ಉಳಿದಿರುವುದು ಕಾಂಗ್ರೆಸ್‌ಗೆ ಎಚ್ಚರಿಕೆ ಗಂಟೆಯಾಗಿರಬಹುದು. ಮುಸ್ಲಿಂ ಮತಗಳು ಸ್ವತಂತ್ರ ಅಭ್ಯರ್ಥಿಗೆ ಅಥವಾ ಬಿಜೆಪಿಗೆ ಚದುರಿದರೆ, ಕ್ಷೇತ್ರದ ಕಾಂಗ್ರೆಸ್ ಭದ್ರಕೋಟೆ ಭೇದಿಸುವ ಸಾಧ್ಯತೆ ಹೆಚ್ಚುತ್ತದೆ. ಏಪ್ರಿಲ್ 9ರ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದರೂ, ಮುಸ್ಲಿಂ ಸಮುದಾಯದೊಂದಿಗಿನ ಸಂಬಂಧ ದುರ್ಬಲವಾಗುತ್ತದೆ. ಇದು ಬಾಗಲಕೋಟೆ ಉಪಚುನಾವಣೆ(ಉಮೇಶ್ ಮೇಟಿ ಅಭ್ಯರ್ಥಿ) ಮತ್ತು ರಾಜ್ಯದ ಇತರ ಕ್ಷೇತ್ರಗಳ ಮುಸ್ಲಿಂ ಮತಬ್ಯಾಂಕ್‌ಗೆ ಸಂದೇಶ ರವಾನಿಸುತ್ತದೆ ಎಂಬುದು ಸ್ಥಳೀಯರ ಅಭಿಪ್ರಾಯವಾಗಿದೆ.

ಸಿದ್ದರಾಮಯ್ಯ ಸರ್ಕಾರದಲ್ಲಿ ಹಲವು ವಿಷಯಗಳಲ್ಲಿ ಮುಸ್ಲಿಂ ಪರ ನಿಲುವು ಪ್ರದರ್ಶಿಸಿದ್ದರೂ, ಕುಟುಂಬ ರಾಜಕಾರಣಕ್ಕೆ ಬಲಿಯಾಗುತ್ತಿದೆ ಎಂಬ ಆರೋಪ ಬಲವಾಗುತ್ತಿದೆ. ದೀರ್ಘಕಾಲದಲ್ಲಿ ಕಾಂಗ್ರೆಸ್ ಮುಸ್ಲಿಂ ನಾಯಕರಿಗೆ ಅಥವಾ ಕ್ಯಾಬಿನೆಟ್ ಸ್ಥಾನಗಳ ಮೂಲಕ ಸಮಾಧಾನಪಡಿಸಬಹುದಾದರೂ ದಾವಣಗೆರೆಯಲ್ಲಿ ಸ್ಥಳೀಯ ಅಸಮಾಧಾನವನ್ನು ನಿಯಂತ್ರಿಸುವುದು ಕಷ್ಟವಾಗಬಹುದು.

ಧಾರ್ಮಿಕ ಸಮತೋಲನ ಕುಟುಂಬ ಆಸ್ತಿ

ಕಾಂಗ್ರೆಸ್ ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿದೆಯೇ ಅಥವಾ ಕುಟುಂಬ ರಾಜಕಾರಣಕ್ಕೆ ಒಗ್ಗಿಕೊಂಡಿದೆಯೇ ಎಂಬ ಮಾತುಗಳು ಕೇಳಿಬರುತ್ತಿವೆ. ಶಾಮನೂರು ಕುಟುಂಬವು ಕ್ಷೇತ್ರವನ್ನು ನಮ್ಮದು ಎಂದು ಭಾವಿಸುವುದು ಸಹಜ. ಆದರೆ ಮುಸ್ಲಿಂ ಮತಗಳು ನಿರ್ಣಾಯಕವಾಗಿರುವಾಗ ಅವರನ್ನು ಕಡೆಗಣಿಸುವುದು ತಪ್ಪು. ಇದು ಕಾಂಗ್ರೆಸ್‌ನ ರಾಷ್ಟ್ರೀಯ ಮಟ್ಟದಲ್ಲಿ ಕಂಡುಬರುವ ರಾಜ ಪ್ರಭುತ್ವ(ಡೈನಸ್ಟಿ) ಸಮಸ್ಯೆಯ ಸ್ಥಳೀಯ ರೂಪ. ಮುಸ್ಲಿಂ ನಾಯಕರು ಬಂಡಾಯ ಎದ್ದರೆ ಅದು ಪಕ್ಷಕ್ಕೆ ಹಾನಿಯುಂಟು ಮಾಡುತ್ತದೆ. ಬದಲಿಗೆ ಬಿಜೆಪಿ ಅಥವಾ ಇತರ ಪಕ್ಷಗಳಿಗೆ ಲಾಭವಾಗುತ್ತದೆ.

ಅಲ್ಪಸಂಖ್ಯಾತರು ಹಾಗೂ ಮುಖಂಡರು ಅಸಮಾಧಾನಗೊಂಡಿದ್ದಾರೆ ಎನ್ನುವ ಪ್ರಶ್ನೆಗೆ ಸಿಎಂ ಸಿದ್ದರಾಮಯ್ಯ ಉತ್ತರಿಸಿದ್ದು, ''ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರಿಗೂ ಕೂಡ ಬೇರೆ ಬೇರೆ ಅವಕಾಶ ನೀಡುವ ಮೂಲಕ ನ್ಯಾಯ ಒದಗಿಸಲಾಗುವುದು. ಬಂಡಾಯ ಅಭ್ಯರ್ಥಿಗಳ ಅಸಮಾಧಾನ ಶಮನ ಮಾಡಿ ನಾಮಪತ್ರ ಹಿಂದಕ್ಕೆ ತೆಗೆಸಲಾಗುವುದು'' ಎಂದು ಹೇಳಿದ್ದಾರೆ.

ಡಿಕೆ ಶಿವಕುಮಾರ್ ಮಾತನಾಡಿ, ''ಸಚಿವ ಜಮೀರ್ ಅಹ್ಮದ್ ಖಾನ್ ಕೂಡ ಮುಂದಿನ ದಿನಗಳಲ್ಲಿ ಕ್ಷೇತ್ರಕ್ಕೆ ಬರಲಿದ್ದಾರೆ. ಅಲ್ಪಸಂಖ್ಯಾತರಿಗೂ ಕೂಡ ನ್ಯಾಯ ಒದಗಿಸುತ್ತೇವೆ'' ಎಂದು ತಲೆ ಸವರುವಂತಹ ಮಾತುಗಳನ್ನಾಡಿದ್ದಾರೆ.

ಶಾಮನೂರು ಶಿವಶಂಕರಪ್ಪ ನಿಧನ ಮತ್ತು ಕ್ಷೇತ್ರದ ವಿಶೇಷತೆ: ಹಲವು ವರ್ಷಗಳಿಂದ ಕಾಂಗ್ರೆಸ್‌ನ ಭದ್ರಕೋಟೆಯಾಗಿದ್ದ ದಾವಣಗೆರೆ ದಕ್ಷಿಣ ಕ್ಷೇತ್ರವು ಹಿರಿಯ ನಾಯಕ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾಗಿದೆ. ಕಳೆದ ನಾಲ್ಕು ಚುನಾವಣೆಗಳಲ್ಲಿ ಕಾಂಗ್ರೆಸ್ ನಿರಂತರ ಗೆಲುವು ಸಾಧಿಸಿದ್ದು, ಕ್ಷೇತ್ರ ಪುನರ್ ವಿಂಗಡಣೆಗೂ ಮುನ್ನವೂ ಇದು ಪಕ್ಷದ ಆಧಾರಸ್ತಂಭವಾಗಿತ್ತು. ಕ್ಷೇತ್ರದಲ್ಲಿ ಸುಮಾರು 2.21 ಲಕ್ಷ ಮತದಾರರಿದ್ದು, ಮುಸ್ಲಿಂ ಮತಗಳ ಸಂಖ್ಯೆ 80,000ಕ್ಕೂ ಅಧಿಕ(ಸುಮಾರು 36%)ವಾಗಿವೆ. ಲಿಂಗಾಯತ ಮತಗಳು ಕಡಿಮೆ ಇದ್ದರೂ ಮುಸ್ಲಿಂ ಸಮುದಾಯವು ಶಾಮನೂರು ಅವರನ್ನು ದಶಕಗಳಿಂದ ಬೆಂಬಲಿಸುತ್ತ ಬಂದಿದೆ. ಇದು ಸಾಂಪ್ರದಾಯಿಕ ಒಗ್ಗಟ್ಟಿನ ಫಲಿತಾಂಶವಾಗಿದೆ.

ಆದರೆ ಈ ಬಾರಿ ಮುಸ್ಲಿಂ ಅಭ್ಯರ್ಥಿಯನ್ನು ಕಾಂಗ್ರೆಸ್ ಪಕ್ಷದಿಂದ ಕಣಕ್ಕಿಳಿಸಬೇಕೆಂದು ಮನವಿ ಮಾಡಿಕೊಂಡಿದ್ದರು. ಶಾಮನೂರು ಶಿವಶಂಕರಪ್ಪ ಅವರೇ, ತಮ್ಮ ಕಾಲದ ನಂತರ ಅಲ್ಪಸಂಖ್ಯಾತರಿಗೆ ಅವಕಾಶ ನೀಡುವುದಾಗಿ ಭರವಸೆ ನೀಡಿದ್ದರು ಎಂಬ ಮಾತಿದೆ. ಸಿಎಂ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ವಸತಿ ಸಚಿವ ಜಮೀರ್ ಅಹ್ಮದ್ ಖಾನ್, ಸಚಿವ ರಹೀಮ್ ಖಾನ್, ರಾಜ್ಯಸಭಾ ಸದಸ್ಯ ನಾಸಿರ್ ಹುಸೇನ್, ಪರಿಷತ್ತು ಮುಖ್ಯ ಸಚೇತಕ ಸಲೀಮ್ ಅಹ್ಮದ್ ಸೇರಿದಂತೆ ಹಲವು ಮುಖಂಡರು ಎಐಸಿಸಿ ಮುಖ್ಯಸ್ಥ ರಣದೀಪ್ ಸುರ್ಜೇವಾಲಾ ಅವರೊಂದಿಗೆ ಸಭೆ ನಡೆಸಿ ಒತ್ತಾಯಿಸಿದ್ದರೂ ಕೂಡ ಕಾಂಗ್ರೆಸ್ ಹೈಕಮಾಂಡ್ ಶಾಮನೂರು ಕುಟುಂಬಕ್ಕೇ ಆದ್ಯತೆ ನೀಡಿದೆ ಎಂಬ ಅಸಮಾಧಾನ ವ್ಯಕ್ತವಾಗಿದೆ.

-ಫಾರಂ ಇಲ್ಲದೆ ನಾಮಪತ್ರ ಸಲ್ಲಿಕೆ ನಾಟಕ: ಸಮರ್ಥ್ ಅವರು ಕಾಂಗ್ರೆಸ್‌ನ ಅಧಿಕೃತ -ಫಾರಂ ಇಲ್ಲದೆ ತಾಯಿ ಪ್ರಭಾ ಮಲ್ಲಿಕಾರ್ಜುನ್ ಜತೆಗೆ ಹೋಗಿ ಮಾರ್ಚ್ 20ರ ಶುಕ್ರವಾರದಂದು ನಾಮಪತ್ರ ಸಲ್ಲಿಸಿದ್ದರು. ಈ ಬಗ್ಗೆ ಕೇಳಿದಾಗ ಡಿ ಕೆ ಶಿವಕುಮಾರ್ ಅವರು ನನಗೆ ಮಾಹಿತಿಯೇ ಇಲ್ಲ ಎಂದು ಪ್ರತಿಕ್ರಿಯಿಸಿದ್ದು, ಪಕ್ಷದ ಒಳಗಿನ ಗೊಂದಲವನ್ನು ಬಯಲು ಮಾಡಿತ್ತು. ಸಮರ್ಥ್ ಅವರು ದಿನ ಚನ್ನಾಗಿತ್ತು ಎಂಬ ನೆಪ ನೀಡಿದರೂ, ಇದು ಕುಟುಂಬದ ಆತ್ಮವಿಶ್ವಾಸದ ಸೂಚನೆಯಾಗಿತ್ತು.

ಸಮರ್ಥ್ ನಾಮಪತ್ರ ಸಲ್ಲಿಕೆಯಲ್ಲಿ ರಾಜ್ಯ ಮುಸ್ಲಿಂ ಮುಖಂಡರು ದೂರ ಉಳಿದಿದ್ದು, ಕಾಂಗ್ರೆಸ್‌ಗೆ ಎಚ್ಚರಿಕೆಯ ಗಂಟೆಯಾಗಿದೆ. ಇದು ಸ್ಥಳೀಯ ಅಸಮಾಧಾನವನ್ನು ಮೀರಿ, ಪಕ್ಷದ ಅಲ್ಪಸಂಖ್ಯಾತ ನೀತಿಯನ್ನೇ ಪ್ರಶ್ನಿಸುತ್ತದೆ. ಡಿ.ಕೆ ಶಿವಕುಮಾರ್ ಮತ್ತು ಸಿದ್ದರಾಮಯ್ಯ ಅವರು ದಾವಣಗೆರೆ ಮುಸ್ಲಿಂ ಆಕಾಂಕ್ಷಿಗಳನ್ನು ತ್ವರಿತವಾಗಿ ಸಮಾಧಾನಪಡಿಸದಿದ್ದರೆ, ಉಪಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಗೆಲುವು ಸುಲಭವಾಗದು. ಇದು ಕೇವಲ ದಾವಣಗೆರೆಯ ಕಥೆಯಲ್ಲ; ಕರ್ನಾಟಕದಲ್ಲಿ ಕಾಂಗ್ರೆಸ್-ಮುಸ್ಲಿಂ ಸಂಬಂಧದ ಮುಂದಿನ ಅಧ್ಯಾಯವನ್ನು ಬರೆಯುತ್ತಿದೆ.

18 ಸಾವಿರ ಕೋಟಿ ರೂ. ದಾಟಿದ ದೇಶದ ಕ್ರೀಡಾ ಅರ್ಥವ್ಯವಸ್ಥೆ; ಕ್ರಿಕೆಟ್ ದರ್ಬಾರಿನಲ್ಲಿ ಸೊರಗಿದ ಇತರ ಆಟಗಳು

ಐಪಿಎಲ್‌ನಲ್ಲಿ ಕೇವಲ ಬೆಂಚ್ ಕಾಯುವ ಸಾಮಾನ್ಯ ಕ್ರಿಕೆಟ್ ಆಟಗಾರನೊಬ್ಬ ಕೋಟ್ಯಾಧಿಪತಿಯಾಗಿ ಐಷಾರಾಮಿ ಜೀವನ ನಡೆಸುತ್ತಾನೆ. ಆದರೆ, ಅದೇ ದೇಶದಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರತಿನಿಧಿಸುವ ಇತರ ಕ್ರೀಡಾಪಟುಗಳು ಸೂಕ್ತ ತರಬೇತಿ ವೆಚ್ಚಕ್ಕಾಗಿ, ಉತ್ತಮ ಪೌಷ್ಟಿಕಾಂಶಯುಕ್ತ ಆಹಾರಕ್ಕಾಗಿ ಪರದಾಡುವ ಸ್ಥಿತಿ ಇದೆ

ಭಾರತದಲ್ಲಿ ಕ್ರೀಡೆ ಎಂಬುದು ಕೇವಲ ಮನರಂಜನೆಯ ಸಾಧನವಾಗಿ ಉಳಿದಿಲ್ಲ; ಅದೀಗ ಬೃಹತ್ ಆರ್ಥಿಕ ಶಕ್ತಿಯಾಗಿ, ಮಹತ್ತರ ಉದ್ಯಮವಾಗಿ ಬೆಳೆದು ನಿಂತಿದೆ. ಇತ್ತೀಚಿನ ಮಾರುಕಟ್ಟೆ ವರದಿಗಳ ಪ್ರಕಾರ ಭಾರತದ ಒಟ್ಟಾರೆ ಕ್ರೀಡಾ ಅರ್ಥವ್ಯವಸ್ಥೆಯು ಇದೇ ಮೊದಲ ಬಾರಿಗೆ 18,000 ಕೋಟಿ ರೂಪಾಯಿಗಳ ಐತಿಹಾಸಿಕ ಮೈಲಿಗಲ್ಲನ್ನು ದಾಟಿದೆ. ಪ್ರಾಯೋಜಕತ್ವ, ದೂರದರ್ಶನ ಮತ್ತು ಡಿಜಿಟಲ್ ಮಾಧ್ಯಮ ಪ್ರಸಾರ ಹಕ್ಕುಗಳು, ಕ್ರೀಡಾ ಸಾಮಗ್ರಿಗಳ ಮಾರಾಟ, ಆಟಗಾರರ ಜಾಹೀರಾತು ಒಪ್ಪಂದಗಳು ಹಾಗೂ ಟಿಕೆಟ್ ಮಾರಾಟವನ್ನು ಒಳಗೊಂಡ ಈ ಭಾರಿ ಮಾರುಕಟ್ಟೆಯು ದೇಶದ ಆರ್ಥಿಕತೆಗೆ ಗಣನೀಯ ಕೊಡುಗೆ ನೀಡುತ್ತಿದೆ. ಆದರೆ, ಈ ಆಕರ್ಷಕ ಅಂಕಿಅಂಶಗಳ ಬೆನ್ನಲ್ಲೇ ಇರುವ ಕಟು ವಾಸ್ತವವೆಂದರೆ, ಈ ಸಂಪೂರ್ಣ ಆರ್ಥಿಕತೆಯ ಸಿಂಹಪಾಲು ಕೇವಲ ಒಂದೇ ಒಂದು ಕ್ರೀಡೆಗೆ, ಅಂದರೆ ಕ್ರಿಕೆಟ್‌ಗೆ ಸೀಮಿತವಾಗಿದೆ.

ಒಟ್ಟು 18 ಸಾವಿರ ಕೋಟಿ ರೂ.ಗಳ ಕ್ರೀಡಾ ಮಾರುಕಟ್ಟೆಯಲ್ಲಿ ಕ್ರಿಕೆಟ್‌ನ ಪಾಲು ಬರೋಬ್ಬರಿ ಶೇಕಡಾ 85ಕ್ಕೂ ಅಧಿಕವಾಗಿದೆ ಎಂದು ಅಂಕಿಅಂಶಗಳು ದೃಢಪಡಿಸುತ್ತವೆ. ಐಪಿಎಲ್‌ನಂತಹ ಫ್ರಾಂಚೈಸಿ ಆಧಾರಿತ ಟೂರ್ನಿಗಳ ಬೃಹತ್ ಯಶಸ್ಸು , ಬಿಸಿಸಿಐ ಗಳಿಸುತ್ತಿರುವ ಸಾವಿರಾರು ಕೋಟಿಗಳ ಆದಾಯ ಮತ್ತು ಕ್ರಿಕೆಟ್ ತಾರೆಗಳ ವೈಯಕ್ತಿಕ ಬ್ರ್ಯಾಂಡ್ ಮೌಲ್ಯವು ಈ ಆರ್ಥಿಕತೆಯ ಪ್ರಮುಖ ಆಧಾರಸ್ತಂಭಗಳಾಗಿವೆ. ಕೇವಲ ಐಪಿಎಲ್ ಪ್ರಸಾರ ಹಕ್ಕುಗಳು ಮುಂದಿನ ಐದು ವರ್ಷಗಳಿಗೆ ದಾಖಲೆಯ ಮೊತ್ತಕ್ಕೆ ಬಿಕರಿಯಾಗಿರುವುದು ಕ್ರಿಕೆಟ್ ಆರ್ಥಿಕ ಪಾರುಪತ್ಯಕ್ಕೆ ಜ್ವಲಂತ ಸಾಕ್ಷಿಯಾಗಿದೆ. ಇದು ಕ್ರಿಕೆಟ್‌ಅನ್ನು ವಿಶ್ವದ ಅತ್ಯಂತ ಶ್ರೀಮಂತ ಕ್ರೀಡಾ ಉದ್ಯಮಗಳಲ್ಲಿ ಒಂದಾಗಿ ಬೆಳೆಸಿದೆ.

ಭಾರತದಲ್ಲಿ ಕ್ರಿಕೆಟ್ ಅನ್ನು ಒಂದು ಧರ್ಮದಂತೆ ಆರಾಧಿಸಲಾಗುತ್ತದೆ. ಅಭಿಮಾನಿಗಳ ಈ ಭಾವನಾತ್ಮಕ ಬೆಂಬಲವನ್ನು ಆರ್ಥಿಕತೆಯನ್ನಾಗಿ ಪರಿವರ್ತಿಸುವಲ್ಲಿ ಮಾರುಕಟ್ಟೆ ತಂತ್ರಜ್ಞರು ಸಂಪೂರ್ಣ ಯಶಸ್ವಿಯಾಗಿದ್ದಾರೆ. ಬಿಸಿಸಿಐ ಇಂದು ವಿಶ್ವದ ಅತ್ಯಂತ ಶ್ರೀಮಂತ ಕ್ರಿಕೆಟ್ ಮಂಡಳಿಯಾಗಿದ್ದು, ಜಾಗತಿಕ ಕ್ರಿಕೆಟ್ ಅನ್ನು ನಿಯಂತ್ರಿಸುವ ಆರ್ಥಿಕ ಬಲವನ್ನು ಹೊಂದಿದೆ. ಕಾರ್ಪೊರೇಟ್ ಕಂಪನಿಗಳು, ಬಹುರಾಷ್ಟ್ರೀಯ ಬ್ರ್ಯಾಂಡ್‌ಗಳು ತಮ್ಮ ಜಾಹೀರಾತು ಬಜೆಟ್‌ನ ಬಹುಪಾಲನ್ನು ಕ್ರಿಕೆಟ್ ಮೇಲೆಯೇ ಹೂಡಿಕೆ ಮಾಡುತ್ತವೆ. ವಿಶ್ವಕಪ್‌ನಂತಹ ಮೆಗಾ ಟೂರ್ನಿಗಳು ನಡೆದಾಗ ಆತಿಥ್ಯ, ಪ್ರವಾಸೋದ್ಯಮ, ಆಹಾರ ವಿತರಣೆ ಮತ್ತು ವಿಮಾನಯಾನ ವಲಯಗಳಿಗೂ ಸಾವಿರಾರು ಕೋಟಿಗಳ ನೇರ ಹಾಗೂ ಪರೋಕ್ಷ ಲಾಭ ಹರಿದುಬರುತ್ತದೆ.

ಆದರೆ ಇತರ ಕ್ರೀಡೆಗಳ ಸ್ಥಿತಿ ಅತ್ಯಂತ ಶೋಚನೀಯ ಹಾಗೂ ಕಳವಳಕಾರಿಯಾಗಿದೆ. 18,000 ಕೋಟಿ ರೂಪಾಯಿಗಳಷ್ಟು ಬೃಹತ್ ಆರ್ಥಿಕತೆಯಿದ್ದರೂ, ಇತರ ಕ್ರೀಡೆಗಳಿಗೆ ಸಿಗುತ್ತಿರುವುದು ಕೇವಲ ಬಿಡಿಗಾಸು. ಹಾಕಿಯಂತಹ ರಾಷ್ಟ್ರೀಯ ಕ್ರೀಡೆ, ಅಥ್ಲೆಟಿಕ್ಸ್, ಫುಟ್‌ಬಾಲ್, ಟೆನಿಸ್, ಬ್ಯಾಡ್ಮಿಂಟನ್, ಕುಸ್ತಿ ಮತ್ತು ಇತರ ಒಲಿಂಪಿಕ್ ಕ್ರೀಡೆಗಳು ಇಂದಿಗೂ ಆರ್ಥಿಕ ಸಂಕಷ್ಟದಲ್ಲಿಯೇ ಉಸಿರುಗಟ್ಟುತ್ತಿವೆ. ಕ್ರಿಕೆಟ್‌ಗಾಗಿ ಸಾವಿರಾರು ಕೋಟಿಗಳನ್ನು ಸುರಿಯುವ ದೇಶದಲ್ಲಿ, ಇತರ ಕ್ರೀಡಾ ಸಂಸ್ಥೆಗು ಕನಿಷ್ಠ ಮೂಲಸೌಕರ್ಯಗಳನ್ನು ಒದಗಿಸಲೂ ಸರ್ಕಾರದ ಅನುದಾನಕ್ಕಾಗಿ, ದಾನಿಗಳ ನೆರವಿಗಾಗಿ ಕೈಯೊಡ್ಡಿ ಕಾಯಬೇಕಾದ ವ್ಯವಸ್ಥಿತ ತಾರತಮ್ಯ ನಮ್ಮ ಕಣ್ಣ ಮುಂದಿದೆ.

ಇತರ ಕ್ರೀಡೆಗಳ ಮೇಲಾಗುತ್ತಿರುವ ಈ ಮಲತಾಯಿ ಧೋರಣೆಯು ಪ್ರಾಯೋಜಕತ್ವದ ಹಂಚಿಕೆಯಲ್ಲಿ ಅತ್ಯಂತ ನಿಚ್ಚಳವಾಗಿ ಗೋಚರಿಸುತ್ತದೆ. ಕ್ರಿಕೆಟ್ ಆಟಗಾರರ ಜೆರ್ಸಿಯ ಮೇಲಿನ ಒಂದು ಸಣ್ಣ ಲೋಗೋ ಪ್ರದರ್ಶನಕ್ಕೂ ಕಂಪನಿಗಳು ನೂರಾರು ಕೋಟಿ ರೂ. ಸುರಿಯಲು ಸಿದ್ಧವಿರುತ್ತವೆ. ಆದರೆ, ಅಂತಾರಾಷ್ಟ್ರೀಯ ಮಟ್ಟದಲ್ಲಿ, ಏಷ್ಯನ್ ಗೇಮ್ಸ್ ಅಥವಾ ಒಲಿಂಪಿಕ್ಸ್ ನಲ್ಲಿ ಪದಕ ಗೆದ್ದು ದೇಶದ ಕೀರ್ತಿ ಪತಾಕೆ ಹಾರಿಸಿದ ಅಥ್ಲೀಟ್‌ಗಳಿಗೂ ಕನಿಷ್ಠ ತರಬೇತಿ ವೆಚ್ಚ ಭರಿಸಲು ಶಾಶ್ವತ ಪ್ರಾಯೋಜಕರು ಸಿಗುವುದು ದುಸ್ತರವಾಗಿದೆ. ವಾಣಿಜ್ಯ ವಲಯವು ಕ್ರಿಕೆಟ್ ನೀಡುವ ತಕ್ಷಣದ ಮಾರುಕಟ್ಟೆ ಮೌಲ್ಯಕ್ಕೆ ಜೋತುಬಿದ್ದು, ಇತರ ನೈಜ ಕ್ರೀಡಾ ಪ್ರತಿಭೆಗಳನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದೆ.

ಮಾಧ್ಯಮಗಳ ಪಾತ್ರವೂ ಈ ತಾರತಮ್ಯವನ್ನು ಪೋಷಿಸುವಲ್ಲಿ ದೊಡ್ಡಮಟ್ಟದಲ್ಲಿದೆ. ದೂರದರ್ಶನ, ಪ್ರಾದೇಶಿಕ ಪತ್ರಿಕೆಗಳು ಮತ್ತು ಡಿಜಿಟಲ್ ಜಗತ್ತಿನಲ್ಲಿ ಪ್ರಸಾರವಾಗುವ ಕ್ರೀಡಾ ಸುದ್ದಿಗಳಲ್ಲಿ ಶೇಕಡಾ 80ರಷ್ಟು ಜಾಗ ಕ್ರಿಕೆಟ್‌ಗೆ ಮೀಸಲಾಗಿರುತ್ತದೆ. ''ಕಾಣುವುದು ಮಾತ್ರ ಮಾರಾಟವಾಗುತ್ತದೆ'' ಎಂಬ ವಾಣಿಜ್ಯ ಸೂತ್ರದಂತೆ, ಮಾಧ್ಯಮಗಳಲ್ಲಿ ಸೂಕ್ತ ಪ್ರಾತಿನಿಧ್ಯವೇ ಸಿಗದ ಕಬಡ್ಡಿ, ಫುಟ್‌ಬಾಲ್ ಅಥವಾ ಅಥ್ಲೆಟಿಕ್ಸ್ ಗೆ ಪ್ರೇಕ್ಷಕರು ಮತ್ತು ಪ್ರಾಯೋಜಕರು ಇಬ್ಬರೂ ಸಿಗುತ್ತಿಲ್ಲ. ಮಾಧ್ಯಮ ಪ್ರಚಾರವಿಲ್ಲದೆ ಪ್ರಾಯೋಜಕರಿಲ್ಲ, ಪ್ರಾಯೋಜಕರಿಲ್ಲದೆ ಕ್ರೀಡೆಯ ಅಭಿವೃದ್ಧಿಯಿಲ್ಲ ಎಂಬ ಈ ವಿಷವರ್ತುಲವು ಕ್ರಿಕೆಟೇತರ ಕ್ರೀಡೆಗಳನ್ನು ತಳಮಟ್ಟದಲ್ಲೇ ಸೊರಗುವಂತೆ ಮಾಡುತ್ತಿದೆ.

ಈ ತಾರತಮ್ಯದ ನೇರ ಮತ್ತು ಅಂತಿಮ ಬಲಿಪಶುಗಳು ನಮ್ಮ ನೆಲದ ಪ್ರತಿಭಾವಂತ ಕ್ರೀಡಾಪಟುಗಳು. ಐಪಿಎಲ್‌ನಲ್ಲಿ ಕೇವಲ ಬೆಂಚ್ ಕಾಯುವ ಸಾಮಾನ್ಯ ಕ್ರಿಕೆಟ್ ಆಟಗಾರನೊಬ್ಬ ಕೋಟ್ಯಾಧಿಪತಿಯಾಗಿ ಐಷಾರಾಮಿ ಜೀವನ ನಡೆಸುತ್ತಾನೆ. ಆದರೆ, ಅದೇ ದೇಶದಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರತಿನಿಧಿಸುವ ಇತರ ಕ್ರೀಡಾಪಟುಗಳು ಸೂಕ್ತ ತರಬೇತಿ ವೆಚ್ಚಕ್ಕಾಗಿ, ಉತ್ತಮ ಪೌಷ್ಟಿಕಾಂಶಯುಕ್ತ ಆಹಾರಕ್ಕಾಗಿ ಪರದಾಡುವ ಸ್ಥಿತಿ ಇದೆ. ಎಷ್ಟೋ ಪ್ರತಿಭಾವಂತರು ಕ್ರೀಡೆಯಲ್ಲಿ ಆರ್ಥಿಕ ಭದ್ರತೆಯಿಲ್ಲದೆ, ಬದುಕಿನ ಬಂಡಿ ಸಾಗಿಸಲು ಕ್ರೀಡೆಯನ್ನೇ ತ್ಯಜಿಸಿ ಸಣ್ಣಪುಟ್ಟ ಕೂಲಿ ಕೆಲಸಗಳಿಗೆ, ಬೀದಿಬದಿ ವ್ಯಾಪಾರಕ್ಕೆ ಇಳಿದಿರುವ ಹೃದಯವಿದ್ರಾವಕ ನೈಜ ಘಟನೆಗಳು ಆಗಾಗ್ಗೆ ವರದಿಯಾಗುತ್ತಲೇ ಇರುತ್ತವೆ.

ಮೂಲಸೌಕರ್ಯಗಳ ಹಂಚಿಕೆಯಲ್ಲೂ ತೀವ್ರ ಹಾಗೂ ಅಮಾನವೀಯ ಅಸಮಾನತೆ ತಾಂಡವವಾಡುತ್ತಿದೆ. ದೇಶಾದ್ಯಂತ ಪ್ರತಿ ರಾಜ್ಯದಲ್ಲೂ, ಪ್ರಮುಖ ನಗರಗಳಲ್ಲೂ ವಿಶ್ವದರ್ಜೆಯ ಕ್ರಿಕೆಟ್ ಕ್ರೀಡಾಂಗಣಗಳು ತಲೆ ಎತ್ತಿವೆ. ಬಿಸಿಸಿಐ ಮತ್ತು ರಾಜ್ಯ ಕ್ರಿಕೆಟ್ ಸಂಸ್ಥೆಗಳು ಸುಸಜ್ಜಿತ ಹವಾನಿಯಂತ್ರಿತ ಒಳಾಂಗಣ ತರಬೇತಿ ಕೇಂದ್ರಗಳನ್ನು ಹೊಂದಿವೆ. ಆದರೆ, ಓಟಗಾರರಿಗೆ ಕನಿಷ್ಠ ಸಿಂಥೆಟಿಕ್ ಟ್ರ್ಯಾಕ್‌ಗಳು, ಜಿಮ್ನಾಸ್ಟ್‌ಗಳಿಗೆ ಗಾಯಗಳಾಗದಂತಹ ಸುರಕ್ಷಿತ ಮ್ಯಾಟ್‌ಗಳು, ಮತ್ತು ಈಜುಗಾರರಿಗೆ ಅಂತಾರಾಷ್ಟ್ರೀಯ ಮಟ್ಟದ ಈಜುಕೊಳಗಳು ಇಂದಿಗೂ ಮರೀಚಿಕೆಯಾಗಿಯೇ ಉಳಿದಿವೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR